ಸಂಪುಟ : 9 ಸಂಚಿಕೆ 123 ಪುಟ : 4 ಬೆಲೆ: 3.00 ಮಂಗಳವಾರ ಜೂನ್ 18 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 123 Pages : 4 Price : 3.00 Tuesady June 18 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25



ಸಂಸದ ಜಗದೀಶ ಶೆಟ್ಟರ ಅವರು ತೋಂಟದಾರ್ಯ ಮಠಕ್ಕೆ ಭೇಟಿ ನೀಡಿ ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಆಶೀರ್ವಾದ ಪಡೆದರು. ಸಂಗಣ್ಣ ಕರಡಿ, ಜ.ತೋಂ. ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟಿ, ರಾಜು ಕುರಡಗಿ ಮುಂತಾದವರು ಉಪಸ್ಥಿತರಿದ್ದರು.

## ವೀರೇಂದ್ರ ಮರಿಬಸಣ್ಣನವರರಿಗೆ ಮುಖ್ಯಮಂತ್ರಿಗಳ ಚಿನ್ನದ ಪದಕ

■ವಿಜಯಸಾಕ್ಷಿ ಸುದ್ದಿ, ಡಂಬಳ



ಮುಂಡರಗಿ ತಾಲೂಕಿನ ಕಪ್ಪತ್ತಗುಡ್ಡ ವಲಯ ಅರಣ್ಯಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ವೀರೇಂದ್ರ ಸೋಮಶೇಖರ್ ಮರಿಬಸಣ್ಣನವರ ಅವರಿಗೆ 2023ನೇ ಸಾಲಿನ ಮುಖ್ಯಮಂತ್ರಿಗಳ ಚಿನ್ನದ ಪದಕ ಘೋಷಣೆಯಾಗಿದೆ. ಅರಣ್ಯ ಇಲಾಖೆಯ ವನ್ಯಜೀವಿಗಳ ಸಂರಕ್ಷಣೆ ವಿಭಾಗದಲ್ಲಿ ವೀರೇಂದ್ರ ಅವರು ಮಾಡಿರುವ ಸಾಧನೆಗಾಗಿ ಈ ಪದಕ ಘೋಷಣೆ ಆಗಿದೆ. ಬೆಂಗಳೂರಿನಲ್ಲಿ ಶೀಘ್ರದಲ್ಲೇ ನಡೆಯಲಿರುವ ಸಮಾರಂಭದಲ್ಲಿ ಮುಖ್ಯಮಂತ್ರಿಗಳು ಪದಕ ಪ್ರದಾನ ಮಾಡಲಿದ್ದಾರೆ. ಅರಣ್ಯ ಸಂರಕ್ಷಣೆ, ಅಕ್ರಮ ಕಡಿತಲೆ ತಡೆಗಟ್ಟುವಿಕೆ, ವನ್ಯಜೀವಿ ಸಂರಕ್ಷಣೆ, ಸಂಶೋಧನೆ, ಅರಣ್ಯ ಪ್ರದೇಶವನ್ನು ಒತ್ತುವರಿದಾರರಿಂದ ತೆರವುಗೊಳಿಸುವುದು, ನೆಡುತೋಪು ಬೆಳಸುವಂತಹ ಸಾಧನೆ, ಅಭಿವೃದ್ಧಿ ಕಾರ್ಯಗಳು, ಮಾನವ-ಪ್ರಾಣಿ ಸಂಘರ್ಷ ಹಾಗೂ ಇತರೆ ನವೀನ ಆಲೋಚನೆಗಳ ಮೂಲಕ ಗಣನೀಯ ಸಾಧನೆ ಮಾಡಿದ ವಲಯ ಅರಣ್ಯ ಇಲಾಖೆಯ ಅಧಿಕಾರಿ ವೀರೇಂದ್ರ ಮರಿಬಸಣ್ಣನವರ ಅವರಿಗೆ ಚಿನ್ನದ ಪದಕ ನೀಡಲಾಗುತ್ತಿದೆ.

## ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಲಿ



■ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ

ಇತ್ತೀಚೆಗೆ ಭೀಕರವಾಗಿ ಹತ್ಯೆಯಾ ಗಿರುವ ರೇಣುಕಸ್ವಾಮಿ ಅವರ ಮನೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಭೇಟಿಯಾದ ಮಾಧ್ಯಮದವರೊಂದಿಗೆ ಮಾತನಾಡಿದ ಜಗದ್ಗುರುಗಳು, ಕುಟುಂಬಕ್ಕೆ ಆಧಾರಸ್ತಂಭವಾಗಿದ್ದ ರೇಣುಕಸ್ವಾಮಿ ಕುಟುಂಬಕ್ಕೆ ಸರ್ಕಾರ ಆರ್ಥಿಕ ನೆರವು ನೀಡಬೇಕು. ಜೊತೆಗೆ ಆತನ ಪತ್ನಿಗೆ ಸರಕಾರಿ ಉದ್ಯೋಗ ನೀಡಬೇಕು. ಗೃಹ ಸಚಿವರಾಗಲಿ, ಮುಖ್ಯ ಮಂತ್ರಿಗಳಾಗಲಿ ಕುಟುಂದವರನ್ನು ಭೇಟಿ ಮಾಡಿ ಧೈರ್ಯ ತುಂಬುವ ಕೆಲಸ ಮಾಡಬೇಕು ಎಂದು ಆಗ್ರಹಿಸಿದರಲ್ಲದೇ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆಗಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಮೃತ ರೇಣುಕಸ್ವಾಮಿ ತಂದೆ ಕಾಶಿನಾಥಸ್ವಾಮಿ ಶಿವನಗೌಡರು, ತಾಯಿ ರತ್ನಪ್ರಭಾ ಹಾಗೂ ಕುಟುಂಬದವರು ಇದ್ದರು.

### ತೈಲ ಬೆಲೆ ಹೆಚ್ಚಳ ಖಂಡಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಜಿಲ್ಲಾ ಬಿಜೆಪಿ ಪ್ರತಿಭಟನೆ

# ಕಾಂಗ್ರೆಸ್ ರಾಜ್ಯದ ಹಿತ ಕಾಪಾಡುತ್ತಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ ಲೀಟರ್ ಪೆಟ್ರೋಲ್‌ಗೆ 3 ರೂ ಹಾಗೂ ಡೀಸೆಲ್ ಪ್ರತಿ ಲಿಟರ್‌ಗೆ 3.50 ರೂ ಏರಿಸಿದ ರಾಜ್ಯ ಸರ್ಕಾರದ ನಡೆ ಖಂಡಿಸಿ ಗದಗ ಜಿಲ್ಲಾ ಬಿಜೆಪಿ ವತಿಯಿಂದ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ನೇತೃತ್ವದಲ್ಲಿ ನಗರದ ಜನರಲ್ ಕಾರ್ಯಪ್ಪ (ಹಳೆ ಡಿಸಿ ಕಚೇರಿ) ವೃತ್ತದಲ್ಲಿ ಬೃಹತ್ ಪ್ರತಿಭಟನೆ ಮಾಡಲಾಯಿತು.




ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ಕರ್ನಾಟಕದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ತಮ್ಮ ಗ್ಯಾರಂಟಿಗಳನ್ನು ಪೂರೈಸಲು ಎಲ್ಲ ಅಗತ್ಯ ವಸ್ತುಗಳ ವಿಶೇಷವಾಗಿ ಪೆಟ್ರೋಲ್, ಡೀಸೆಲ್ ದರವನ್ನು ಹೆಚ್ಚಿಸುವ ಮೂಲಕ ಕರ್ನಾಟಕದ ಜನತೆಗೆ ಮೋಸ ಮಾಡುತ್ತಿದೆ. ನುಡಿದಂತೆ ನಡೆದ ಸರ್ಕಾರ ಎಂದು ಹೇಳುವ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ರಾಜ್ಯದ ಹಿತ ಕಾಪಾಡುವುದರಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ಸರ್ಕಾರದ ಸಚಿವರುಗಳೆಲ್ಲಾ ಬೆಲೆ ಏರಿಕೆಯನ್ನು ಗಂಭೀರವಾಗಿ ತೆಗೆದುಕೊಳ್ಳದೇ ಮನಬಂದಂತೆ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ಇಂದು ಸಾಂಕೇತಿಕ ಪ್ರತಿಭಟನೆ ಕೈಗೊಂಡಿದ್ದು, ತೈಲ ಬೆಲೆ ಇಳಿಸದಿದ್ದರೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದರು.

ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ ಮಾತನಾಡಿ, ಕಾಂಗ್ರೆಸ್‌ನ ಪೊಳ್ಳು, ಸುಳ್ಳು ಗ್ಯಾರಂಟಿಗಳನ್ನು ಪೂರೈಸಲು ರಾಜ್ಯದ ಜನರ ಜೀವನದೊಂದಿಗೆ ಚೆಲ್ಲಾಟವಾಡುತ್ತಿರುವ ಮತಿಹೀನ ಸರ್ಕಾರ ನಮ್ಮ ರಾಜ್ಯವನ್ನಾಳುತ್ತಿದೆ. ತಮ್ಮ ಅಧಿಕಾರದಲ್ಲಿ ಎಲ್ಲ ಅಗತ್ಯ ವಸ್ತುಗಳ ಬೆಲೆಗಳನ್ನು ಮನಬಂದಂತೆ ಏರಿಕೆ ಮಾಡುತ್ತಿದೆ. ಮುಂದೆ ಈ ಕೆಟ್ಟ ಸರ್ಕಾರದ ನೀತಿ ನಿಯಮಗಳ ಬಗ್ಗೆ ಸತ್ಯಾಂಶವನ್ನು ಹೊರ ಹಾಕಿ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ನಿರಂತರ ಕಾರ್ಯ ಮಾಡುತ್ತೇವೆ ಎಂದರು.

ಹಿರಿಯರಾದ ಎಂ.ಎಸ್. ಕರೀಗೌಡ್ರ ಮಾತನಾಡಿ, ರಾಜ್ಯದ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರ ವಹಿಸಿಕೊಂಡಾಗಿನಿಂದ ಇಲ್ಲಿಯವರೆಗೂ ರಾಜ್ಯದ ಹಿತ ಕಾಪಾಡುವುದನ್ನು ಬಿಟ್ಟು ತಮ್ಮ ಖುರ್ಚಿಯನ್ನು ಭದ್ರಗೊಳಿಸುವಲ್ಲಿ ನಿರತರಾಗಿದ್ದಾರೆಯೇ ಹೊರತು, ರಾಜ್ಯದ ಅಭಿವೃದ್ಧಿಯೆಡೆಗೆ ಗಮನ ಹರಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಪಕ್ಷದ ಪ್ರಮುಖರಾದ ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಪಕ್ಕಿರೇಶ ರಟ್ಟಿಹಳ್ಳಿ, ರವಿ ಕರಿಗಾರ, ನಿಂಗಪ್ಪ ಮಣ್ಣೂರ, ಮುತ್ತು ಕಡಗದ, ಕಾಂತೀಲಾಲ ಬನ್ಸಾಲಿ, ಸಂಗಮೇಶ ದುಂದೂರ, ಎಂ.ಎಂ. ಹಿರೇಮಠ, ಜಗನ್ನಾಥಸಾ ಭಾಂಡಗೆ, ನಾಗರಾಜ ಕುಲಕರ್ಣಿ, ಶ್ರೀಪತಿ ಉಡುಪಿ, ಸಿದ್ದು ಪಲ್ಲೇದ, ಅಶೋಕ ಸಂಕಣ್ಣವರ, ರಮೇಶ ಹತ್ತಿಕಾಳ, ವಿ.ಕೆ. ಗುರುಮಠ, ಸಂತೋಷ ಅಕ್ಕಿ, ಬೂದಪ್ಪ ಹಳ್ಳಿ, ಭದ್ರೇಶ ಕುಸ್ಲಾಪೂರ, ಗಂಗಾಧರ ಹಬೀಬ, ಕಿಷನ್ ಮೇರವಾಡೆ, ರಾಘವೇಂದ್ರ ಯಳವತ್ತಿ, ಸುರೇಶ ಚಿತ್ತರಗಿ, ಈರ್ಷಾ ಮಾನ್ವಿ, ರವಿ ದಂಡಿನ, ಬಸವರಾಜ ಸಂಗನಾಳ, ಅಶೋಕ ಕರೂರ, ವಾಯ್.ಪಿ. ಅಡ್ನೂರ, ಮಂಜುನಾಥ ಹಳ್ಳೂರಮಠ, ನಾಗರಾಜ ತಳವಾರ, ಚಂದ್ರು ತಡಸದ, ಪ್ರಕಾಶ ಅಂಗಡಿ, ಲಕ್ಷ್ಮೀ ಶಂಕರ ಕಾಕಿ, ಮಹೇಶ ದಾಸರ, ಮಂಜುನಾಥ ತಳವಾರ, ಮಹಾದೇವಪ್ಪ ಚಿಂಚಲಿ, ನಾಗರಾಜ ಮದ್ನೂರ, ಶೇಖಣ್ಣ ಕಟ್ಟಿಮನಿ, ಮುತ್ತು ಮೂಲಿಮನಿ, ರವಿ ವಗ್ಗನವರ, ಶಶಿಧರ ದಿಂಡೂರ, ಹನಮಂತಪ್ಪ ದಿಂಡೆಣ್ಣವರ, ಸಿದ್ದಪ್ಪ ಈರಗಾರ, ಮಾಧುಸಾ ಮೇರವಾಡೆ, ಶಿವು ಹಿರೇಮನಿಪಾಟೀಲ, ಅಶ್ವಿನಿ ಜಗತಾಪ, ಪದ್ಮಿನಿ ಮುತ್ತಲದಿನ್ನಿ, ಕಮಲಾಕ್ಷಿ ಬಳಿಶೆಟ್ಟರ, ರೇಖಾ ಬಂಗಾರಶೆಟ್ಟರ, ಯೋಗೇಶ್ವರಿ ಭಾವಿಕಟ್ಟಿ, ವಿಜಯಲಕ್ಷ್ಮೀ ಮಾನ್ವಿ, ಶಕ್ತಿ ಕತ್ತಿ, ಸಂತೋಷ ಜಾವೂರ, ಕಮಲಾಕ್ಷೀ ಗೊಂದಿ, ಮಂಜುನಾಥ ಮುಳಗುಂದ, ಕುಮಾರ ಮಾರನಬಸರಿ, ವೆಂಕಟೇಶ ಹಬೀಬ, ಶಿವು ಗೊಟೂರ, ಕೃಷ್ಣಾ ಚಿಂತಾ, ರಾಹುಲ ಸಂಕಣ್ಣವರ, ನಾಗರಾಜ ಖೋಡೆ, ಸುರೇಶ ಹೆಬಸೂರ, ಪ್ರಕಾಶ, ರಾಜಶೇಖರ ಪಾಟೀಲ, ಮಹದೇವಪ್ಪ ಹಡಪದ, ವಿಶ್ವನಾಥ ಶಿರಿಗಣ್ಣವರ, ಅರವಿಂದ ಹುಲ್ಲೂರ, ಪ್ರಕಾಶ ಕೊತಂಬರಿ, ರತ್ನಾ ಕುರಗೋಡ, ಕಾರ್ತಿಕ ಮುತ್ತಿನಪೆಂಡಿಮಠ, ಗುರುಶಾಂತಗೌಡ ಮರೀಗೌಡ್ರ, ಕಸ್ತೂರಿ ಕಮ್ಮಾರ, ವಿನೋದ ಹಂಸನೂರ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.










ಬಕ್ರೀದ್ ಹಬ್ಬದ ನಿಮಿತ್ತ ಜಾಮಿಯಾ ಮಸ್ಜಿದ್‌ನಲ್ಲಿ ಜರುಗಿದ ವಿಶೇಷ ಪ್ರಾರ್ಥನೆಯ ನಂತರ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ ಅವರು ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದರು.



ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಮನ್ ಕೀ ಬಾತ್ ಕಾರ್ಯಕ್ರಮದಲ್ಲಿ ಪ್ರಶಂಸೆ ಪಡೆದ ನಗರದ ಕಲಾಚೇತನ ಸಾಂಸ್ಕೃತಿಕ ಆಕಾಡೆಮಿ ಸಂಸ್ಥಾಪಕರಾದ ಡಾ.ಕಾವೆಂಶ್ರೀಯವರು ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿಯವರನ್ನು ಭೇಟಿಯಾಗಿ ಮತ್ತೊಮ್ಮೆ ಕೇಂದ್ರ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಅವರನ್ನು ಅಭಿನಂದಿಸಿದರು. ಈ ಸಂದರ್ಭದಲ್ಲಿ ಕಲಾಚೇತನ ಸಾಂಸ್ಕೃತಿಕ ಅಕಾಡೆಮಿ ಉಪಾಧ್ಯಕ್ಷ ವಿಶ್ವನಾಥ್ ನಾಲವಾಡದ, ಕಾರ್ಯದರ್ಶಿ ಪ್ರಕಾಶ್ ಬೇಲಿ ಹಾಗೂ ಲೆಕ್ಕ ಪರಿಶೋಧಕ ಎನ್.ವಿ. ಪಾಟೀಲ್ ಉಪಸ್ಥಿತರಿದ್ದರು.

### ಪ್ರವಾಸೋದ್ಯಮ ಕ್ಷೇತ್ರದ ಅಭಿವೃದ್ಧಿಗೆ ಎಫ್‌ಕೆಸಿಸಿಐ ಕೊಡುಗೆ ಶ್ಲಾಘನೀಯ: ಡಾ. ಎಚ್.ಕೆ. ಪಾಟೀಲ

# ಜನಸಾಮಾನ್ಯರ ಪ್ರವಾಸೋದ್ಯಮಕ್ಕೂ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶಕ್ತಿ ಯೋಜನೆಯಿಂದಾಗಿ ರಾಜ್ಯದ ಪ್ರವಾಸೋದ್ಯಮ ಕ್ಷೇತ್ರಗಳಿಗೆ ಭೇಟಿ ನೀಡುವವರ ಸಂಖ್ಯೆ ಶೇ 50ರಷ್ಟು ಹೆಚ್ಚಾಗಿದೆ. ಈ ಕ್ಷೇತ್ರಗಳಲ್ಲಿ ಇನ್ನೂ ಹೆಚ್ಚಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ವ್ಯಾಪಕ ಅವಕಾಶವಿದೆ. ದಕ್ಷಿಣ ಭಾರತ ಉತ್ಸವದ ಮೂಲಕ ಹರಿದು ಬಂದಿರುವ ಸುಮಾರು 4200 ಕೋಟಿ ರೂಪಾಯಿಗಳ ಹೂಡಿಕೆಯ ಜೊತೆಗೆ ಇನ್ನಷ್ಟು ಹೆಚ್ಚು ಹಣವನ್ನು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಬಳಸುವಂತೆ ಪ್ರವಾಸೋದ್ಯಮ ಹಾಗೂ ಕಾನೂನು ಸಚಿವ ಡಾ. ಎಚ್.ಕೆ. ಪಾಟೀಲ ಕರೆ ನೀಡಿದರು.

ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದ್ದ ದಕ್ಷಿಣ ಭಾರತ ಉತ್ಸವದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.




ದಕ್ಷಿಣ ಭಾರತ ರಾಜ್ಯಗಳಲ್ಲಿ ಪ್ರವಾಸೋದ್ಯಮ ಕ್ಷೇತ್ರದ ಅಭಿವೃದ್ಧಿಗೆ ವಿಪುಲ ಅವಕಾಶಗಳಿವೆ. ಅವುಗಳಲ್ಲಿ ಹೂಡಿಕೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಎಫ್‌ಕೆಸಿಸಿಐ ಆಯೋಜಿಸಿರುವ ಈ ಕಾರ್ಯಕ್ರಮ ಬಹಳ ಮಹತ್ವದ್ದಾಗಿದೆ. ಈ ಉತ್ಸವದ ಮೂಲಕ ಸುಮಾರು 4200 ಕೋಟಿ ರೂಗಳಷ್ಟು ಹೂಡಿಕೆಯ ಪ್ರಸ್ತಾವನೆಗಳಿಗೆ ಒಡಂಬಡಿಕೆ ಆಗುವ ನಿಟ್ಟಿನಲ್ಲಿ ಪ್ರಮುಖ ಪಾತ್ರ ವಹಿಸಿರುವ ಎಫ್‌ಕೆಸಿಸಿಐ ಪದಾಧಿಕಾರಿಗಳ ಕಾರ್ಯ ಅಭಿನಂದನೆಗೆ ಅರ್ಹವಾಗಿದೆ.

ದಕ್ಷಿಣ ಭಾರತ ಸಾಂಸ್ಕೃತಿಕ ಪ್ರವಾಸೋದ್ಯಮದ ಪ್ರಮುಖ ತಾಣವಾಗಿದೆ. ಈ ಉತ್ಸವದ ಮೂಲಕ ದಕ್ಷಿಣ ಭಾರತ ರಾಜ್ಯಗಳ ಐತಿಹಾಸಿಕ, ಪಾರಂಪರಿಕ, ಸ್ಮಾರಕ ಸಂಪನ್ಮೂಲಗಳಲ್ಲಿನ ಅವಕಾಶಗಳನ್ನು ತೋರಿಸುವ ವೇದಿಕೆಯನ್ನು ನೀಡಲಾಗಿದೆ. ಎಲ್ಲರೂ ಜೊತೆಗೂಡಿ ವಿಶ್ವ ಪ್ರವಾಸೋದ್ಯಮ ಭೂಪಟದಲ್ಲಿ ಉತ್ತಮ ಸ್ಥಾನ ಪಡೆದುಕೊಳ್ಳುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗೋಣ ಎಂದು ಕರೆ ನೀಡಿದರು.

ಎಫ್‌ಕೆಸಿಸಿಐ ಅಧ್ಯಕ್ಷ ರಮೇಶ್ ಚಂದ್ರ ಲಹೋಟಿ ಮಾತನಾಡಿ, ದಕ್ಷಿಣ ಭಾರತ ರಾಜ್ಯಗಳನ್ನು ಒಂದೇ ವೇದಿಕೆಯ ಅಡಿಯಲ್ಲಿ ತರುವ ಪ್ರಯತ್ನಕ್ಕೆ ಯಶಸ್ಸು ದೊರೆತಿದೆ. ಕೈಗಾರಿಕಾ ಉತ್ಪಾದನೆ, ಕೃಷಿಯ ನಂತರ ಹೆಚ್ಚಿನ ಉದ್ಯೋಗಾವಕಾಶಗಳನ್ನ ಮತ್ತು ಹೂಡಿಕೆಯ ಅವಕಾಶ ಇರುವುದು ಪ್ರವಾಸೋದ್ಯಮ ಕ್ಷೇತ್ರದಲ್ಲಿ. ಈ ಉತ್ಸವದ ಮೂಲಕ ಎಫ್‌ಕೆಸಿಸಿಐ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೂಡಿಕೆ ಮಾಡುವಂತೆ ಉದ್ದಿಮೆದಾರರನ್ನು ಪ್ರೋತ್ಸಾಹಿಸಿದೆ. ಇದರಿಂದಾಗಿ ಸುಮಾರು 4200 ಕೋಟಿ ರೂ.ಗಳಷ್ಟು ಬಂಡವಾಳ ಹೂಡಿಕೆಯ ಪ್ರಸ್ತಾವನೆಗಳಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲೂ ಎಫ್‌ಕೆಸಿಸಿಐ ವತಿಯಿಂದ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೂಡಿಕೆಗೆ ಪ್ರೋತ್ಸಾಹ ನೀಡಲು ಆದ್ಯತೆ ನೀಡಲಾಗುವುದು ಎಂದರು.

> ಶಕ್ತಿ ಯೋಜನೆಯ ಅನುಷ್ಠಾನದ ನಂತರ ರಾಜ್ಯದಲ್ಲಿ ಎಲ್ಲಾ ಪ್ರವಾಸೋದ್ಯಮ ಕ್ಷೇತ್ರಗಳಿಗೆ ಭೇಟಿ ನೀಡುವವರ ಸಂಖ್ಯೆ ಶೇ.50ರಷ್ಟು ಹೆಚ್ಚಾಗಿದೆ. ಈ ಕ್ಷೇತ್ರಗಳಲ್ಲಿ ಮೂಲಭೂತ ಸೌಕರ್ಯಗಳನ್ನ ಹೆಚ್ಚಿಸುವುದು ಕೇವಲ ಸರಕಾರದಿಂದ ಸಾಧ್ಯವಿಲ್ಲ. ಈ ಕ್ಷೇತ್ರಗಳಲ್ಲಿ ಹೂಡಿಕೆಗೆ ವಿಪುಲ ಅವಕಾಶಗಳಿವೆ. ಇಲ್ಲಿನ ಹೂಡಿಕೆಯಿಂದ ಉದ್ದಿಮೆದಾರರು ಉಪಯೋಗವನ್ನು ಪಡೆದುಕೊಳ್ಳಬಹುದಾಗಿದೆ. ಪ್ರವಾಸೋದ್ಯಮ ಎಂದರೆ ಕೇವಲ ಲಕ್ಸುರಿ ಪ್ರವಾಸೋದ್ಯಮ ಅಲ್ಲ, ಸಾಮಾನ್ಯ ಜನರ ಪ್ರವಾಸೋದ್ಯಮಕ್ಕೂ ಸರಕಾರ ಆದ್ಯತೆ ನೀಡುತ್ತದೆ.
>
> – ಎಚ್.ಕೆ. ಪಾಟೀಲ.
> **ಕಾನೂನು, ಪ್ರವಾಸೋದ್ಯಮ ಸಚಿವರು.**

ಕಾರ್ಯಕ್ರಮದಲ್ಲಿ ಬಂಡವಾಳ ಹೂಡಿಕೆಗೆ ಮುಂದಾದ ಕೆಲವು ಉದ್ದಿಮೆದಾರರಿಗೆ ಒಡಂಬಡಿಕೆಯ ಪತ್ರಗಳನ್ನು ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಹಾಗೂ ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ ವಿತರಿಸಿದರು.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆ ನಿರ್ದೇಶಕ ಡಾ. ವಿ.ರಾಮ್ ಪ್ರಸಾತ್ ಮನೋಹರ್ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ನಟ ದರ್ಶನ್ ಪ್ರಕರಣ: 'ಯಾರನ್ನೂ ರಕ್ಷಿಸುವ, ಸಾಫ್ಟ್ ಕಾರ್ನರ್ ತೋರಿಸುವ ಪ್ರಶ್ನೆಯೇ ಇಲ್ಲ'



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರೇಣುಕಾ ಸ್ವಾಮಿ ಹತ್ಯೆ ಆರೋಪದಲ್ಲಿ ಬಂಧಿತರಾಗಿರುವ ನಟ ದರ್ಶನ್ ಮತ್ತು ನಟಿ ಪವಿತ್ರಾ ಗೌಡ ಅವರ ಪ್ರಕರಣದಲ್ಲಿ ಯಾರಿಗೂ ಸಾಫ್ಟ್ ಕಾರ್ನರ್ ತೋರಿಸುವ ಪ್ರಶ್ನೆಯೇ ಇಲ್ಲ ಎಂದು ಗೃಹ ಸಚಿವ ಜಿ. ಪರಮೇಶ್ವರ ಹೇಳಿದ್ದಾರೆ.

ಈ ಬಗ್ಗೆ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಪೊಲೀಸರು ಯಾವುದೇ ಪರಿಗಣನೆಗೆ ಒಳಗಾಗದೆ ಕ್ರಮ ಕೈಗೊಳ್ಳುತ್ತಾರೆ. ಯಾರನ್ನೂ ರಕ್ಷಿಸುವ ಅಥವಾ ಸಾಫ್ಟ್ ಕಾರ್ನರ್ ತೋರಿಸುವ ಪ್ರಶ್ನೆಯೇ ಇಲ್ಲ, ಅಂತಹ ಯಾವುದೇ ವಿಷಯಗಳಿಗೆ ನಾವು ಮಣಿಯುವುದಿಲ್ಲ" ಎಂದರು.

ಸೂಕ್ಷ್ಮ ಮಾಹಿತಿಯನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಲು ನಿರಾಕರಿಸಿದ ಗೃಹ ಸಚಿವರು, ತನಿಖೆಯ ನಂತರ ತನಿಖಾ ವರದಿಯನ್ನು ಹೊರತರಲಾಗುವುದು ಎಂದು ಹೇಳಿದರು.


ತನಿಖೆ ಯಾವಾಗ ಮುಗಿಯುತ್ತದೆ ಎಂಬ ಪ್ರಶ್ನೆಗೆ ಉತ್ತರಿಸಿದ ಪರಮೇಶ್ವರ, "ಅದನ್ನು ತನಿಖಾ ತಂಡಕ್ಕೆ ಬಿಡಲಾಗಿದೆ; ಕಾನೂನು ಪ್ರಕಾರ ಏನೇ ಕ್ರಮ ಕೈಗೊಳ್ಳಬೇಕೋ ಅದನ್ನು ಪ್ರಾರಂಭಿಸಲಾಗುವುದು.

ನಾನು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವುದೇ ಪರಿಗಣನೆಯಿಲ್ಲದೆ ಕ್ರಮ ಕೈಗೊಳ್ಳುತ್ತೇವೆ ಎಂದು ಪದೇ ಪದೇ ಹೇಳಿದ್ದೇವೆ" ಎಂದು ಅವರು ಹೇಳಿದರು.

ತನಿಖಾ ತಂಡಕ್ಕೆ ಇನ್ಸ್‌ಪೆಕ್ಟರ್ ಗಿರೀಶ್ ನಾಯ್ಕ್ ಅವರನ್ನು ಮರು ಸೇರ್ಪಡೆ ಗೊಳಿಸುವ ಕುರಿತು ಪ್ರತಿಕ್ರಿಯಿಸಿ, "ಅಂತಹ ಬದಲಾವಣೆಗಳು ಆಡಳಿತಾತ್ಮಕ ಅವಶ್ಯಕತೆಗಳಿಗೆ ಒಳಪಟ್ಟಿರುತ್ತವೆ ಮತ್ತು ತನಿಖೆಯ ಭಾಗವಾಗಿ ಯಾರನ್ನು ತೆಗೆದುಕೊಳ್ಳಬೇಕು ಎಂಬುದನ್ನು ನಿರ್ಧರಿಸಲು ಪೊಲೀಸ್ ಇಲಾಖೆಗೆ ಬಿಡಲಾಗಿದೆ" ಎಂದು ಹೇಳಿದರು.

ಪವಿತ್ರಾ ಗೌಡ ಅವರಿಗೆ ಅಶ್ಲೀಲ ಸಂದೇಶ ರವಾನಿಸಿದ ಆರೋಪದ ಮೇಲೆ ಜೂನ್ 8 ರಂದು ಚಿತ್ರದುರ್ಗದ ರೇಣುಕಾಸ್ವಾಮಿ ಅವರನ್ನು ಕೊಲೆ ಮಾಡಿದ ಆರೋಪದ ಮೇಲೆ ದರ್ಶನ್ ಸೇರಿದಂತೆ ಅವರ 17 ಮಂದಿ ಸಹಾಯಕರನ್ನು ಬಂಧಿಸಲಾಗಿತ್ತು.

## ಪೋಕ್ಸೋ ಪ್ರಕರಣ | ಸಿಐಡಿ ಮುಂದೆ ವಿಚಾರಣೆಗೆ ಹಾಜರಾದ ಯಡಿಯೂರಪ್ಪ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ ಎಸ್ ಯಡಿಯೂರಪ್ಪ ವಿರುದ್ಧ ದಾಖಲಾಗಿರುವ ಪೋಕ್ಸೊ ಪ್ರಕರಣಕ್ಕೆ ಸಂಬಂಧಿಸಿದಂತೆ ಸೋಮವಾರ ಸಿಐಡಿ ಮುಂದೆ ವಿಚಾರಣೆಗೆ ಯಡಿಯೂರಪ್ಪ ಹಾಜರಾಗಿದ್ದಾರೆ.

ಪ್ರಕರಣ ದಾಖಲಾಗಿ ಮೂರು ತಿಂಗಳ ಬಳಿಕ ವಿಚಾರಣೆ ಎರಡನೇ ವಿಚಾರಣೆ ಎದುರಿಸುತ್ತಿದ್ದಾರೆ. ಸಿಐಡಿ ಎಡಿಜಿಪಿ ಬಿ ಕೆ ಸಿಂಗ್, ಡಿವೈಎಸ್‌ಪಿ ತನಿಖಾಧಿಕಾರಿ ಪೃಥ್ವಿಯವರಿಂದ ಯಡಿಯೂರಪ್ಪ ವಿಚಾರಣೆ ನಡೆದಿದೆ.

ಈಗಾಗಲೇ ಸಿಐಡಿ ಅಧಿಕಾರಿಗಳು ಧ್ವನಿ ಮಾದರಿಯನ್ನು ಸಂಗ್ರಹಿಸಿ ಕಳುಹಿಸಿದ್ದಾರೆ. ಐದು ದಿನ ಕಾಲಾವಕಾಶವನ್ನು ಕೋರಿ ಯಡಿಯೂರಪ್ಪ ಮನವಿ ಮಾಡಿದ್ದರು. ಈಗಾಗಲೇ ಸಿಐಡಿ ಯಡಿಯೂರಪ್ಪ ಅವರ ವಿಚಾರಣೆಯನ್ನು ನಡೆಸಿದೆ.

ಸುದ್ದಿ ನಿರಂತರವಾಗಿ ಉಚಿತವೇ ಆಗಿರುವುದು ಹೇಗೆ ಸಾಧ್ಯ? ಅದಕ್ಕೆ ನಿಮ್ಮ ಬೆಂಬಲವೂ ನಿರಂತರವಾಗಿ ಇದ್ದಾಗ ಮಾತ್ರ ಸಾಧ್ಯ. ಚಂದಾದಾರರಾಗಿ – ಆ ಮೂಲಕ ಸತ್ಯ, ನ್ಯಾಯ, ಪ್ರೀತಿ ಮೌಲ್ಯಗಳನ್ನು ಎಲ್ಲರಿಗೂ ಹರಡಲು ಜೊತೆಯಾಗಿ.

ಸಿಐಡಿ ಅಧಿಕಾರಿಗಳು ವಿಚಾರಣೆಗೆ ಹಾಜರಾಗುವಂತೆ ಯಡಿಯೂರಪ್ಪಗೆ ಎರಡು ಬಾರಿ ನೋಟಿಸ್ ನೀಡಿದ್ದರು. ಆದರೆ, ವಿಚಾರಣೆಗೆ ಅವರು ಹಾಜರಾಗಿರಲಿಲ್ಲ. ಇದರಿಂದಾಗಿ ಸಿಐಡಿ ಅಧಿಕಾರಿಗಳು ಯಡಿಯೂರಪ್ಪ ವಿರುದ್ಧ ಬಂಧನ ವಾರಂಟ್ ಹೊರಡಿಸುವಂತೆ ಕೋರಿ ನಗರದ 1ನೇ ತ್ವರಿತಗತಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಅದನ್ನು ಪರಿಗಣಿಸಿರುವ ನ್ಯಾಯಪೀಠ ಬಿಎಸ್‌ವೈ ಬಂಧನಕ್ಕೆ ಜಾಮೀನು ರಹಿತ ವಾರಂಟ್ ಹೊರಡಿಸಿತ್ತು.

ಈ ನಡುವೆ ತಮ್ಮ ವಿರುದ್ಧ ದಾಖಲಾಗಿರುವ ದೂರು ಮತ್ತು ಪೋಕ್ಸೊ ವಿಶೇಷ ನ್ಯಾಯಾಲಯದ ವಿಚಾರಣಾ ಪ್ರಕ್ರಿಯೆ ರದ್ದುಪಡಿಸಬೇಕು ಎಂದು ಕೋರಿ ಯಡಿಯೂರಪ್ಪ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪರನ್ನು ಬಂಧಿಸದಂತೆ ನಿರ್ದೇಶನ ನೀಡಿತ್ತು. ವಿಚಾರಣೆಗೆ ಹಾಜರಾಗಲು ಹೈಕೋರ್ಟ್ ಸೂಚಿಸಿತ್ತು.

### ಬೀಚಿ ಬಳಗದಿಂದ ನಿವೃತ್ತ ಶಿಕ್ಷಕರು, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ

## ಶಿಕ್ಷಕರು ಸಮರ್ಪಣಾ ಮನೋಭಾವನೆ ಹೊಂದಿ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಬರುವ ಸಂಬಳ, ಸಿಗುವ ಸೌಲಭ್ಯಗಳ ಬಗ್ಗೆ ಯೋಚಿಸದೆ ಸದಾಕಾಲ ಯಾರು ವಿದ್ಯಾರ್ಥಿಗಳ ಬಗ್ಗೆ ಯೋಚಿಸುತ್ತಾರೆಯೋ ಅವರು ಮಕ್ಕಳ ಮನದಲ್ಲಿ ಶಾಶ್ವತ ಸ್ಥಾನವನ್ನು ಪಡೆಯುತ್ತಾರೆ. ಇಂಥವರು ನಿಜವಾದ ಶಿಕ್ಷಕರಾಗಿದ್ದು, ಅವರಲ್ಲಿ ಸಮರ್ಪಣಾ ಮನೋಭಾವ ಇದ್ದಾಗ ಮಾತ್ರ ಇಂತಹ ಕಾರ್ಯ ಆಗಲು ಸಾಧ್ಯ. ಆದ್ದರಿಂದ ಶಿಕ್ಷಕರು ಸಮರ್ಪಣಾ ಮನೋಭಾವನೆಯನ್ನು ಹೊಂದಿರಬೇಕಾದುದು ಅವಶ್ಯಕವಾಗಿದೆ ಎಂದು ಎಸ್.ಎ.ವಿ ಬಾಲಿಕೆಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಸ್. ಎನ್. ಹೂಲಗೇರಿ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಸೋಮವಾರ ಜರುಗಿದ ಬೀಚಿ ಬಳಗದ ಮಾಸಿಕ ಸಭೆಯಲ್ಲಿ ನಿವೃತ್ತ ಶಿಕ್ಷಕರು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಅವರು



ಮಾತನಾಡಿದರು.

ಶಿಕ್ಷಕ ವೃತ್ತಿ ಎಲ್ಲರ ಹಾಗೆ ಬರೀ ವೃತ್ತಿಯಲ್ಲ. ಅದೊಂದು ತಪಸ್ಸಿದ್ದಂತೆ. ಹಿಂದಿನ ಜನ್ಮದಲ್ಲಿನ ಪುಣ್ಯದ ಅಂಶವೇನಾದರೂ ಉಳಿದಿದ್ದರೆ ಅಂತಹವರು ಮಾತ್ರ ಶಿಕ್ಷಕರಾಗಲು ಸಾಧ್ಯ. ಇದು ಎಲ್ಲರಿಗೂ ಸುಲಭದಲ್ಲಿ ಲಭಿಸುವಂತಹದಲ್ಲ. ಪಟ್ಟಣದಲ್ಲಿ ಕಳೆದ 10 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಬೀಚಿ ಬಳಗ ತನ್ನ ವಿಶೇಷ ಕಾರ್ಯಕ್ರಮಗಳ ಮೂಲಕ ಜನಮನ್ನಣೆ ಪಡೆಯುತ್ತಿದೆ. ಇಂದು ಸನ್ಮಾನಗೊಂಡ ಶಿಕ್ಷಕರು ತಮ್ಮ ಸೇವೆಯಲ್ಲಿರುವಾಗ ತಮ್ಮ ಕರ್ತವ್ಯ ನಿಷ್ಠೆ ಹಾಗೂ ಸಮರ್ಪಣಾ ಮನೋಭಾವನೆಯಿಂದ ಸಮರ್ಪಕ ಸೇವೆಯನ್ನು ಸಲ್ಲಿಸಿ ನಿವೃತ್ತರಾಗಿದ್ದಾರೆ. ಅವರ ನಿವೃತ್ತ ಜೀವನ ಸುಖಮಯವಾಗಿರಲಿ ಎಂದು ಹಾರೈಸಿದರು.

ಸಭೆಯನ್ನುದ್ದೇಶಿಸಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ, ಅಧ್ಯಕ್ಷತೆ ವಹಿಸಿದ್ದ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಮಾತನಾಡಿದರು. ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ, ನಿವೃತ್ತ ಸೈನಿಕ ಶಿವಪುತ್ರಪ್ಪ ಸಂಗನಾಳ, ಜಿ.ಎ. ಬೆಲ್ಲದ, ಈಶ್ವರಪ್ಪ ಇಳಕಲ್ಲ, ಎಸ್.ವಿ. ಕಳಕಣ್ಣವರ, ಎನ್.ಎಸ್. ಹಿರೇಮಠ, ಶಿಕ್ಷಕ ಎಂ.ಕೆ. ಬೇವಿನಕಟ್ಟಿ, ಕಾರ್ಯದರ್ಶಿ ಎಚ್.ವಿ. ಈಟಿ, ಮಲ್ಲಯ್ಯ ಗುಂಡಗೋಪುರಮಠ, ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ, ಶಿಕ್ಷಕ ವಿ.ಎ. ಕುಂಬಾರ, ಆರ್.ಎಸ್. ನರೇಗಲ್ಲ, ಸಂಚಾಲಕ ಈಶ್ವರ ಬೆಟಗೇರಿ, ಶಿವಾನಂದ ಗೋಗೇರಿ ಮುಂತಾದವರು ಪಾಲ್ಗೊಂಡಿದ್ದರು.

ಮುಖ್ಯ ಶಿಕ್ಷಕಿ ನಿರ್ಮಲಾ ಹಿರೇಮಠ ಪ್ರಾರ್ಥಿಸಿದರು. ಶಿಕ್ಷಕ ಜೆ.ಎ. ಪಾಟೀಲ ಸ್ವಾಗತಿಸಿದರು. ಬಳಗದ ಹಿಂದಿನ ಅಧ್ಯಕ್ಷ ಡಾ. ಆರ್.ಕೆ. ಗಚ್ಚಿನಮಠ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶಿಕ್ಷಕ ಬಿ.ಟಿ. ತಾಳಿ ಜಕ್ಕಲಿಯ ಅಣ್ಣಯ್ಯ-ತಮ್ಮಯ್ಯ ಪುಸ್ತಕದ ಬಗ್ಗೆ ಮಾತನಾಡಿದರು. ಶಿವಯೋಗಿ ಜಕ್ಕಲಿ ನಿರೂಪಿಸಿದರು. ಮುಖ್ಯ ಶಿಕ್ಷಕ ಬಿ.ಬಿ. ಕುರಿ ವಂದಿಸಿದರು.

ಸಭೆಯಲ್ಲಿ ನಿವೃತ್ತ ಮುಖ್ಯ ಶಿಕ್ಷಕರಾದ ಎಚ್.ಎಂ. ರತ್ನಮ್ಮ, ಆರ್.ಬಿ. ಪ್ರಭಣ್ಣವರ, ಶಂಕ್ರಮ್ಮ ಇಳಕಲ್ಲ ಹಾಗೂ ಬಿ.ಆರ್. ರಂಗಣ್ಣವರ ಗುರುಗಳನ್ನು ಮತ್ತು ಪಿಯುಸಿಯಲ್ಲಿ ಶೇ. 90ಕ್ಕಿಂತ ಹೆಚ್ಚಿನ ಅಂಕ ಪಡೆದ ಭರತ ಈಶ್ವರ ಬೆಟಗೇರಿ, ಎಸ್.ಎಸ್.ಎಲ್.ಸಿಯಲ್ಲಿ ಶೇ. 90ಕ್ಕಿಂತ ಹೆಚ್ಚಿನ ಅಂಕ ಪಡೆದ ಚೇತನಾ ಮಹಾದೇವಪ್ಪ ಬೇವಿನಕಟ್ಟಿಯವರನ್ನು, ನೂರಕ್ಕೆ ನೂರು ಫಲಿತಾಂಶ ಸಾಧಿಸಿದ ಎಸ್.ಎ.ವಿ ಬಾಲಿಕೆಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಅವರನ್ನು ಸನ್ಮಾನಿಸಲಾಯಿತು.

## ಶಿಕ್ಷಕರ ಸೇವೆ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಲಿಸಿದ ಗುರುಗಳಿಗೆ, ಹೆತ್ತವರಿಗೆ ಮಕ್ಕಳ ಶೈಕ್ಷಣಿಕ ಸಾಧನೆಯೇ ದೊಡ್ಡ ಕಾಣಿಕೆ ಮತ್ತು ಸಂತಸವನ್ನು ನೀಡುತ್ತದೆ ಎಂದು ಎಪಿಎಂಸಿ ಮಾಜಿ ಅಧ್ಯಕ್ಷ ಬಸಣ್ಣ ಬೆಟಗೇರಿ ಹೇಳಿದರು.

ಅವರು ತಾಲೂಕಿನ ರಾಮಗೇರಿ ಗ್ರಾಮದ ಯಜಮಾನ್ ಜಿ.ಎಫ್. ಉಪನಾಳ ಸರ್ಕಾರಿ ಪ್ರೌಢಶಾಲೆಯಲ್ಲಿ ಪ್ರತಿಭಾವಂತ ಮಕ್ಕಳಿಗೆ ಶಾಲೆಯ ಶಿಕ್ಷಕಿ, ಸಾಹಿತಿ ಮೈತ್ರಾದೇವಿ ಹಿರೇಮಠ ಅವರು ತಮ್ಮ ತಂದೆ ರಾಚಯ್ಯಸ್ವಾಮಿ ತಾಯಿ ಶಿವಗಂಗೆಯರ ಸ್ಮರಣಾರ್ಥ ಮಕ್ಕಳಿಗೆ ನಗದು ಪುರಸ್ಕಾರ, ಶಿಕ್ಷಕರು, ಹಿರಿಯರಿಗೆ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು.

ಶಿಕ್ಷಣ/ಶಿಕ್ಷಕರ ಸೇವೆ ಅತ್ಯಂತ ಶ್ರೇಷ್ಠವಾಗಿದ್ದು, ಎಲ್ಲ ಮಕ್ಕಳನ್ನೂ ಪ್ರೀತಿ, ವಿಶ್ವಾಸ, ಸಮಾನತೆಯಿಂದ ಕಂಡು ವಿದ್ಯೆ ಕಲಿಸುವ ಶಿಕ್ಷಕರ ಸೇವೆ ಶ್ಲಾಘನೀಯ. ಅಲ್ಲದೇ





ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರೇರಣೆ, ಪ್ರೋತ್ಸಾಹ ನೀಡಿ ಹರಸಿ-ಹಾರೈಸುವ ಶಿಕ್ಷಕರು ಸದಾ ಸ್ಮರಣೀಯರು. ಈ ನಿಟ್ಟಿನಲ್ಲಿ ರಾಮಗೇರಿ ಶಾಲೆಯ ಶಿಕ್ಷಕಿ ಮೈತ್ರಾದೇವಿ ಹಿರೇಮಠ ಅವರ ಕಾರ್ಯ ಪ್ರಶಂಸನೀಯ ಎಂದರು.

ಎಸ್‌ಎಸ್‌ಎಸ್‌ಸಿ ಪರೀಕ್ಷೆಯ ಸಮಾಜ ವಿಜ್ಞಾನ ವಿಷಯಕ್ಕೆ 100ಕ್ಕೆ 100 ಅಂಕ ಪಡೆದ ವಿನೋದ ಪಾಟೀಲಗೆ 5001 ರೂ, 99 ಅಂಕ ಪಡೆದ ನವೀನ ಕುರಿ, ಅಕಾಶ ಜುಲಪಿ, ರವಿ ತಳವಾರ ಅವರಿಗೆ 1001 ರೂ ನಗದು ಬಹುಮಾನ ಹಾಗೂ ಮಾಲತಿ ದೊಡ್ಡಮನಿ, ಸಂಗೀತಾ ಬಡಿಗೇರ, ಪವನ್ ಪೂಜಾರ ಅವರಿಗೆ ತಮ್ಮದೇ 'ಅನುಭಾವ ಶರದಿ' ಪುಸ್ತಕ ನೀಡಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ತಾ.ಪಂ ಮಾಜಿ ಸದಸ್ಯೆ ಮುತ್ತಕ್ಕ ಬೆಟಗೇರಿ, ಗ್ರಾ.ಪಂ ಅಧ್ಯಕ್ಷೆ ಅಡಿವೆಕ್ಕ ಬೆಟಗೇರಿ, ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪ ಯಂಗಾಡಿ, ಸದಸ್ಯರು, ಉಪನ್ಯಾಸಕ ಮಂಜುನಾಥ ಕೊಕ್ಕರಗೊಂದಿ, ಮುಖ್ಯ ಶಿಕ್ಷಕಿ ಜೆ.ಎಸ್. ಹಿರೇಮಠ ಹಾಗೂ ಶಿಕ್ಷಕ ವೃಂದದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಇಂದು ಗದಗ ಜಿಲ್ಲೆಗೆ ಸಂಸದ ಬೊಮ್ಮಾಯಿ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ಲೋಕಸಭಾ ಸದಸ್ಯರಾದ ಬಸವರಾಜ್ ಬೊಮ್ಮಾಯಿ ಅವರು ಜೂನ್ 18 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಜೂನ್ 18 ರಂದು ಮಧ್ಯಾಹ್ನ 2 ಗಂಟೆಗೆ ನರಗುಂದ ಶಾಸಕರಾದ ಸಿ.ಸಿ.ಪಾಟೀಲ್ ಅವರ ಮನೆಗೆ ಭೇಟಿ ನೀಡುವರು.

ನಂತರ ನರಗುಂದದಿಂದ ರಸ್ತೆ ಮೂಲಕ ಸಂಜೆ 4 ಗಂಟೆಗೆ ಗದಗ ಆಗಮಿಸಿ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಕೇಂದ್ರ ಸರ್ಕಾರದ ಯೋಜನೆ ಮತ್ತು ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವರು.

ನಂತರ ಸಂಜೆ 6ಗಂಟೆಗೆ ನಗರಸಭೆ ಆವರಣದಲ್ಲಿ ಅಮೃತ ನಗರೋತ್ಥಾನ ಯೋಜನೆ 4ನೇ ಹಂತದ ಕಾಮಗಾರಿಯ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ರಾತ್ರಿ 8ಗಂಟೆಗೆ ಗದಗದಿಂದ ರಸ್ತೆ ಮೂಲಕ ಹುಬ್ಬಳ್ಳಿಗೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

## 'ಎನ್‌ಸಿಇಆರ್‌ಟಿ'ಯು ಆರ್‌ಎಸ್‌ಎಸ್ ಅಂಗಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ: ಜೈರಾಮ್ ರಮೇಶ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಎನ್‌ಸಿಇಆರ್‌ಟಿ ಪಠ್ಯಪುಸ್ತಕಗಳ ಪರಿಷ್ಕರಣೆ ವಿವಾದದ ಮಧ್ಯೆ, ಸಂಸ್ಥೆಯು 2014 ರಿಂದ ಆರ್‌ಎಸ್‌ಎಸ್ ಅಂಗಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ ಮತ್ತು ಸಂವಿಧಾನದ ಮೇಲೆ ದಾಳಿ ನಡೆಸುತ್ತಿದೆ ಎಂದು ಕಾಂಗ್ರೆಸ್ ಮುಖಂಡ ಜೈರಾಮ್ ರಮೇಶ್ ಸೋಮವಾರ ಆರೋಪಿಸಿದ್ದಾರೆ.

ನೀಟ್ 2024 ರಲ್ಲಿ 'ಗ್ರೇಸ್ ಮಾರ್ಕ್' ವೈಫಲ್ಯಕ್ಕೆ ಎನ್‌ಸಿಇಆರ್‌ಟಿ ಅನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ದೂಷಿಸಿದೆ ಎಂದು ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ರಮೇಶ್ ಹೇಳಿದ್ದಾರೆ. ಅದು ಕೇವಲ ಎನ್‌ಟಿಎಯ ಹೀನಾಯ ವೈಫಲ್ಯದಿಂದ ಗಮನ ಸೆಳೆಯುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಆದಾಗ್ಯೂ ಎನ್‌ಸಿಇಆರ್‌ಟಿ ಇನ್ನು ಮುಂದೆ ವೃತ್ತಿಪರ ಸಂಸ್ಥೆಯಾಗಿಲ್ಲ ಎಂಬುದು ನಿಜ. ಇದು 2014 ರಿಂದ ಆರ್‌ಎಸ್‌ಎಸ್ ಅಂಗಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. ಅದರ ಪರಿಷ್ಕೃತ ಹನ್ನೊಂದನೇ ತರಗತಿಯ ರಾಜ್ಯಶಾಸ್ತ್ರ ಪಠ್ಯಪುಸ್ತಕವು ಜಾತ್ಯತೀತತೆ-ಯ ಕಲ್ಪನೆಯನ್ನು ಟೀಕಿಸುತ್ತದೆ ಮತ್ತು ಅದು ಈ ನಿಟ್ಟಿನಲ್ಲಿ ರಾಜಕೀಯ ಪಕ್ಷಗಳ ನೀತಿಗಳು ಏನು ಪರಿಗಣಿಸುತ್ತದೆ ಎಂಬುದನ್ನು ಬಹಿರಂಗಪಡಿಸಲಾಗಿದೆ" ಎಂದಿದ್ದಾರೆ.

ಎನ್‌ಸಿಇಆರ್‌ಟಿಯ ಉದ್ದೇಶ ಪಠ್ಯಪುಸ್ತಕಗಳನ್ನು ತಯಾರಿಸುವುದು, ರಾಜಕೀಯ ಕರಪತ್ರಗಳು ಮತ್ತು ಪ್ರಚಾರವಲ್ಲ" ಎಂದು ಅವರು ಕಿಡಿಕಾರಿದ್ದಾರೆ.

ಎನ್‌ಸಿಇಆರ್‌ಟಿಯು ನಮ್ಮ ದೇಶದ ಸಂವಿಧಾನದ ಮೇಲೆ ಆಕ್ರಮಣವನ್ನು ನಡೆಸುತ್ತಿದೆ, ಅದರ ಮುನ್ನುಡಿಯಲ್ಲಿ ಜಾತ್ಯತೀತತೆಯು ಭಾರತೀಯ ಗಣರಾಜ್ಯದ ಅಡಿಪಾಯದ ಆಧಾರ ಸ್ತಂಭವಾಗಿದೆ. ವಿವಿಧ ಸುಪ್ರೀಂ ಕೋರ್ಟ್ ತೀರ್ಪುಗಳು ಜಾತ್ಯತೀತತೆಯನ್ನು ಸಂವಿಧಾನದ ಮೂಲಭೂತ ರಚನೆಯ ಅತ್ಯಗತ್ಯ ಭಾಗವೆಂದು ಸ್ಪಷ್ಟವಾಗಿ ಹಿಡಿದಿವೆ" ಎಂದು ಅವರು ಹೇಳಿದರು. ಎನ್‌ಸಿಇಆರ್‌ಟಿಯು ತಾನು ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿ ಎಂದು ನೆನಪಿಸಿಕೊಳ್ಳಬೇಕಾಗಿದೆ, "ನಾಗ್ಪುರ ಅಥವಾ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿಗಾಗಿ ನರೇಂದ್ರ ಕೌನ್ಸಿಲ್ ಅಲ್ಲ.

## ಗಂಗೆ ಸಕಲ ಜೀವರಾಶಿಗಳ ಉಸಿರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ವಿವಿಧೋದ್ದೇಶಗಳ ಸಂಘ ಮತ್ತು ಗಂಗಾಮತ ಸಮಾಜ ಬಾಂಧವರಿಂದ ಗಂಗಾಮಾತಾ ಜಯಂತ್ಯುತ್ಸವವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಬೆಳಿಗ್ಗೆ ಪಟ್ಟಣದ ಪುರಸಭೆ ಹತ್ತಿರದ ಸುಣಗಾರ ಓಣಿಯ ಗಂಗಾದೇವಿ ದೇವಸ್ಥಾನದಲ್ಲಿ ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಬಳಿಕ ಗಂಗಾದೇವಿ ಭಾವಚಿತ್ರದ ಮೆರವಣಿಗೆ ಪೂರ್ಣಕುಂಭ ಮತ್ತು ವಾದ್ಯಗಳ ಸಮೇತ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ನೆರವೇರಿತು.

ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಭಗೀರಥನ ತಪಸ್ಸಿಗೆ ಮೆಚ್ಚಿದ ಗಂಗಾ ಮಾತೆ ಭೂಲೋಕದ ಸಕಲ ಚರಾಚರಗಳಿಗೂ ಆಶ್ರಯದಾತೆ ಮತ್ತು ಸಕಲ



ಜೀವರಾಶಿಗಳಿಗೆ ಉಸಿರಾದ ದಿನವೆಂದು ಗಂಗಾಮಾತಾ ಜಯಂತಿ ಆಚರಿಸಲಾಗುತ್ತದೆ. ಪವಿತ್ರ ಗಂಗಾಮಾತೆ ಜೀವಿಗಳಿಗೆ ಜೀವಜಲ, ಪಾಪ-ಕರ್ಮ, ಕಲ್ಮಶಗಳನ್ನೆಲ್ಲ ತೊಳೆದುಹಾಕಿ ಮೋಕ್ಷ ಕರುಣಿಸುವ ಮಹಾತಾಯಿಯಾಗಿದ್ದಾಳೆ. ಗಂಗಾಮತ ಸಮಾಜ ಬಾಂಧವರು ತಮ್ಮ ಕಾಯಕದ ಜತೆಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯವಾಗಿ ಬೆಳೆಯಬೇಕು ಎಂದರು.

ಪುರಸಭೆ ಮಾಜಿ ಅಧ್ಯಕ್ಷೆ ಅಶ್ವಿನಿ ಅಂಕಲಕೋಟಿ ಮಾತನಾಡಿ, ಗಂಗಾಮತ ಸಮಾಜ ಚಿಕ್ಕದಾದರೂ ತಮ್ಮ ಕಾಯಕನಿಷ್ಠೆ, ಧರ್ಮ ಮಾರ್ಗದ ಮೂಲಕ ಇತರೆ ಸಮಾಜದೊಂದಿಗೆ ಅನ್ಯೋನ್ಯತೆಯಿಂದ ಬದುಕುತ್ತಿರುವುದು ಇತರೇ ಸಮಾಜಕ್ಕೆ ಮಾದರಿಯಾಗಿದೆ ಎಂದರು.

ಈ ವೇಳೆ ಸುನೀಲ ಮಹಾಂತಶೆಟ್ಟರ, ಚಂಬಣ್ಣ ಬಾಳಿಕಾಯಿ, ನಿಂಗಪ್ಪ ಬನ್ನಿ, ಗಂಗಾಮತ ಸಮಾಜದ ಅಧ್ಯಕ್ಷ ಭರಮಪ್ಪ ಕಟ್ಟಿಮನಿ, ಆರ್.ಎಫ್. ರಿತ್ತಿ, ವಿರೇಂದ್ರ ಕಾಳಮ್ಮನವರ, ಎನ್.ಎಸ್. ಜಾಲಗಾರ, ಮಾಂತೇಶ ಶಿಗ್ಲಿ, ರಾಜು ಸುಣಗಾರ, ಎಂ.ಜಿ. ಕಟ್ಟಿಮನಿ, ಬಸವರಾಜ ಜಾಲಗಾರ, ಸೋಮಣ್ಣ ಸುಣಗಾರ, ನಾಗರಾಜ ಸುಣಗಾರ, ಮೌನೇಶ ಬಡಿಗೇರ, ಮಾಲತೇಶ ತಂಡಿಗೇರ, ಆಕಾಶ ಸವದತ್ತಿ, ನಾಗರಾಜ ಮಳಗಿ, ಈಶ್ವರ ಕಟ್ಟಿಮನಿ, ಗುಡದಯ್ಯ ಬಾರ್ಕಿ, ಮಲ್ಲೇಶಪ್ಪ ಬಾರ್ಕಿ, ಉಮೇಶ ಬೆಳವಗಿ, ಬಸವರಾಜ ಬೆಳವಗಿ ಮುಂತಾದವರಿದ್ದರು.




ಗದುಗಿನ ವಿಜಯನಗರ ಬಡಾವಣೆಯಲ್ಲಿ ನೂತನವಾಗಿ ನಿರ್ಮಾಣವಾದ ಶ್ರೀ ವಿಶ್ವಕರ್ಮ ಭವನದಲ್ಲಿ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಉಡುಪಿಯ ಕಡಪಾಡಿ ಪಡುಕುತ್ಯಾರು ಸರಸ್ವತಿ ಪೀಠದ ಪೂಜ್ಯ ಜಗದ್ಗುರು ಅನಂತ ಶ್ರೀ ವಿಭೂಷಿತ ಕಾಳಹಸ್ತೇಂದ್ರ ಮಹಾಸ್ವಾಮೀಜಿ ಉದ್ಘಾಟಿಸಿದರು. ಗದಗ ಎಪಿಎಂಸಿ ಸದಸ್ಯ ಅಪ್ಪಣ್ಣ ಇನಾಮತಿ, ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ, ಗಣ್ಯರಾದ ಕೆ.ಡಿ. ಬಡಿಗೇರ, ಪಿ.ಬಿ. ಬಡಿಗೇರ, ಎ.ಆರ್. ಬಡಿಗೇರ, ನಿರಂಜನ ಎನ್.ಬಡಿಗೇರ, ಎ.ಎನ್. ಬಡಿಗೇರ ಕೆ.ಎಸ್. ಬಡಿಗೇರ, ಬಿ.ಎಮ್. ಬಡಿಗೇರ, ಶಿವಲೀಲಾ ಬಡಿಗೇರ, ರಿಂದಮ್ಮ ವಡ್ಡಟ್ಟಿ ಉಪಸ್ಥಿತರಿದ್ದರು.

### ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಸಮಾವೇಶ

## ಸಂಪಾದಕರ ಸಂಘದಿಂದ ಸಚಿವ ಎಚ್.ಕೆ. ಪಾಟೀಲರೊಂದಿಗೆ ಚರ್ಚೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದಿಂದ ಜುಲೈ ತಿಂಗಳಲ್ಲಿ ರಾಜ್ಯ ಸಮಾವೇಶ ಆಯೋಜನೆಗೆ ರಾಜ್ಯ ಕಾರ್ಯಕಾರಿ ಸಮಿತಿಯಲ್ಲಿ ತೀರ್ಮಾನಿಸಲಾಗಿದ್ದು, ಇದಕ್ಕೆ ಸಹಾಯ, ಸಹಕಾರ ನೀಡುವ ಮೂಲಕ ಸಮಾವೇಶ ಯಶಸ್ವಿಗೆ ಸಹಕರಿಸಬೇಕು ಎಂದು ಕಾರ್ಯನಿರತ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ ಮನವಿ



ಮಾಡಿದರು.

ಸಮಾವೇಶದ ಕುರಿತು ಸಚಿವ ಎಚ್.ಕೆ. ಪಾಟೀಲರನ್ನು ಜಿಲ್ಲಾ ಸಂಪಾದಕರ ಸಂಘದ ನಿಯೋಗದೊಂದಿಗೆ ಭೇಟಿ ಮಾಡಿ ಈ ಕುರಿತು ಸಚಿವರಿಗೆ ಮನವಿ ಮಾಡಿದರು.

ರಾಜ್ಯದ ಎಲ್ಲ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರು ಸಮಾವೇಶದಲ್ಲಿ ಭಾಗವಹಿಸಲಿದ್ದು, ಈ ಹಿನ್ನೆಲೆಯಲ್ಲಿ ಸಮಾವೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಲು ತೀರ್ಮಾನಿಸಲಾಗಿದೆ. ಹೀಗಾಗಿ ತಾವು ಮುಖ್ಯಮಂತ್ರಿಗಳ ದಿನಾಂಕ ನಿಗದಿಪಡಿಸಿಕೊಡಲು ಈ ವೇಳೆ ಸಚಿವರಿಗೆ ಮನವಿ ಮಾಡಲಾಯಿತು.

ಈ ವೇಳೆ ಪ್ರತಿಕ್ರಿಯಿಸಿದ ಸಚಿವ ಎಚ್.ಕೆ. ಪಾಟೀಲ್ ಈ ಕುರಿತು ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ದಿನಾಂಕ ನಿಗದಿ ಮಾಡಲಾಗುವುದು. ಜಿಲ್ಲೆಯಲ್ಲಿ ನಡೆಯುತ್ತಿರುವ ಸಮಾವೇಶ ಅಚ್ಚುಕಟ್ಟಾಗಿ ನಡೆಸಬೇಕು. ಇದಕ್ಕೆ ತಮ್ಮ ಸಹಕಾರ ಇದೆ ಎಂದು ಹೇಳಿದರು.

ಈ ವೇಳೆ ಸಂಘದ ಜಿಲ್ಲಾ ಉಪಾಧ್ಯಕ್ಷ ಎನ್.ಆರ್. ಭಾಂಡಗೆ, ಕಾರ್ಯದರ್ಶಿ ದೇವಪ್ಪ ಲಿಂಗದಾಳ, ಅಜಿತ್ ಹೊಂಬಾಳಿ, ಜಗದೀಶ ಪೂಜಾರ, ಕುನಾಲ ಅಬ್ಬಿಗೇರಿ ಹಾಗೂ ಜಿಪಂ ಮಾಜಿ ಅಧ್ಯಕ್ಷ ಶಿದ್ಧಲಿಂಗೇಶ್ ಪಾಟೀಲ್, ಕಾಂಗ್ರೆಸ್ ಮುಖಂಡರಾದ ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಉಮರಫಾರೂಕ್ ಹುಬ್ಬಳ್ಳಿ ಸೇರಿದಂತೆ ಇತರರು ಇದ್ದರು.

### ವಿಶ್ವಕರ್ಮ ಭವನ ಉದ್ಘಾಟನೆ, ಪ್ರತಿಭಾ ಪುರಸ್ಕಾರ, ಪ್ರಶಸ್ತಿ ಪ್ರದಾನ ಕಾರ್ಯಕ್ರಮ

# ಶಿಕ್ಷಣದೊಂದಿಗೆ ಸಂಸ್ಕಾರವನ್ನೂ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಸದೃಢ ಹಾಗೂ ಮಾದರಿ ಸಮಾಜ ನಿರ್ಮಾಣವಾಗಬೇಕಾದರೆ ಮಕ್ಕಳಿಗೆ ಶಿಕ್ಷಣದೊಂದಿಗೆ ಸಂಸ್ಕಾರ ನೀಡುವುದು ಬಹಳ ಮುಖ್ಯ. ಸಂಸ್ಕಾರಭರಿತ ಶಿಕ್ಷಣದಿಂದ ಸಮಾಜದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ ಎಂದು ಉಡುಪಿಯ ಕಡಪಾಡಿ ಪಡುಕುತ್ಯಾರು ಸರಸ್ವತಿ ಪೀಠದ ಪರಮ ಪೂಜ್ಯ ಜಗದ್ಗುರು ಅನಂತ ಶ್ರೀ ವಿಭೂಶಿತ ಕಾಳಹಸ್ತೇಂದ್ರ ಮಹಾಸ್ವಾಮೀಜಿ ಹೇಳಿದರು.

ಅವರು ನಗರದ ವಿಜಯನಗರ ಬಡಾವಣೆಯಲ್ಲಿ ನೂತನವಾಗಿ ನಿರ್ಮಾಣವಾದ ಶ್ರೀ ವಿಶ್ವಕರ್ಮ ಭವನ ಉದ್ಘಾಟನೆ, 6ನೇ ವರ್ಷದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ, ವಿಶ್ವಕರ್ಮ ನೌಕರಶ್ರೀ, ವಿಶ್ವಕರ್ಮ 'ಸಾಧಕಶ್ರೀ' ಪ್ರಶಸ್ತಿ ಪ್ರದಾನ ಹಾಗೂ ಸಂಘದ ನಿವೃತ್ತ ಸದಸ್ಯರಿಗೆ ಸನ್ಮಾನ ಮತ್ತು ಕಟ್ಟಡಕ್ಕೆ ದೇಣಿಗೆ ನೀಡಿದ ದಾನಿಗಳ ಭಾವಚಿತ್ರ ಅನಾವರಣ ಸಮಾರಂಭದ ಸಾನ್ನಿಧ್ಯ ವಹಿಸಿ, ವಿಶ್ವಕರ್ಮ ಭವನ ಉದ್ಘಾಟಿಸಿ ಆಶೀರ್ವಚನ ನೀಡಿದರು.

ವಿಶ್ವಕರ್ಮರು ಸಮಾಜ ಸಂಘಟನೆಯಲ್ಲಿ ಎಲ್ಲರೂ ಒಮ್ಮನಸ್ಸಿನಿಂದ ಒಳಗೊಂಡಾಗ ಮಾತ್ರ ಸಮಾಜ ಎಲ್ಲ ಸ್ತರದಿಂದ ಬಲಾಢ್ಯವಾಗಲು ಸಾಧ್ಯ. ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಸಂಘ ರಾಜ್ಯದಲ್ಲಿಯೇ ಮಾದರಿಯಾಗಿ ರಾಜಗೋಪಾಲ ಕಡ್ಲಿಕೊಪ್ಪ ಅವರ ಸಾರಥ್ಯದಲ್ಲಿ ಅಭಿವೃದ್ಧಿ ಕಾರ್ಯ ಮಾಡುತ್ತಿರುವುರು ಸಂತೋಷದ ಸಂಗತಿ ಎಂದರು.




ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಗದಗ ಎಪಿಎಂಸಿ ಸದಸ್ಯ ಅಪ್ಪಣ್ಣ ಇನಾಮತಿ ಮಾತನಾಡಿ, ವಿಶ್ವಕರ್ಮರ ಕೌಶಲ್ಯ ಮಾದರಿಯದು. ನವ ತಲೆಮಾರು ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ತಮ್ಮ ಉದ್ಯೋಗದಲ್ಲಿ ಪ್ರಗತಿ ಹೊಂದಬೇಕು. ಜಿಲ್ಲಾ ವಿಶ್ವಕರ್ಮ ನೌಕರರ ಸಂಘ ಮತ್ತೊಬ್ಬರು ಅನುಕರಣೆ ಮಾಡುವ ರೀತಿಯಲ್ಲಿ ಸಮಾಜ ಸಂಘಟಿಸುವುದರೊಂದಿಗೆ ಅಭಿವೃದ್ಧಿ ಕಾರ್ಯ ಸಾಕಾರಗೊಳಿಸುವಲ್ಲಿ ರಾಜಗೋಪಾಲ ಕಡ್ಲಿಕೊಪ್ಪ ಅವರ ಪಾತ್ರ ಹಿರಿದು ಎಂದರು.

ರಾಯಚೂರ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಡಿ. ಬಡಿಗೇರ, ಶಿರಸಂಗಿ ವಿಶ್ವಕರ್ಮ ವಿಕಾಸ ಸಂಸ್ಥೆಯ ಅಧ್ಯಕ್ಷ ಪಿ.ಬಿ. ಬಡಿಗೇರ, ಬೀದರ ಜಿಲ್ಲಾ ವಿಶ್ವಕರ್ಮ ಸಮಾಜ ಪ್ರಧಾನ ಕಾರ್ಯದರ್ಶಿ ಶಿವಾನಂದ ವಿಶ್ವಕರ್ಮ, ನಿವೃತ್ತ ಪೊಲೀಸ್ ಅಧೀಕ್ಷಕ ಎ.ಆರ್. ಬಡಿಗೇರ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಸಂಘದ ನಿವೃತ್ತ ಸದಸ್ಯರ ಸನ್ಮಾನ, ವಿಶ್ವಕರ್ಮ ನೌಕರಶ್ರೀ, ವಿಶ್ವಕರ್ಮ ಸಾಧಕಶ್ರೀ ಪ್ರಶಸ್ತಿ ಪ್ರದಾನ ಮತ್ತು ಕಟ್ಟಡ ನಿರ್ಮಾಣಕ್ಕೆ ದೇಣಿಗೆ ನೀಡಿದ ದಾನಿಗಳನ್ನು ಅಭಿನಂದಿಸಲಾಯಿತು.

ವೇದಿಕೆಯಲ್ಲಿ ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ, ಲಕ್ಷ್ಮೇಶ್ವರ ತಹಸೀಲ್ದಾರ ವಾಸುದೇವ ಎ.ಸ್ವಾಮಿ, ಉದ್ಯಮಿಗಳಾದ ನಿರಂಜನ ಎನ್.ಬಡಿಗೇರ, ಜಿಲ್ಲಾ ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ಗೌರವ ಅಧ್ಯಕ್ಷ ಎ.ಎನ್. ಬಡಿಗೇರ, ವಿಶ್ವಕರ್ಮ ಮಹಾಸಭಾ ಧಾರವಾಡ ಜಿಲ್ಲಾ ಅಧ್ಯಕ್ಷ ಕಾಳಪ್ಪ ಬಡಿಗೇರ, ನಿರ್ದೇಶಕರುಗಳಾದ ಬಿ.ಎಂ. ಬಡಿಗೇರ, ಕೆ.ಎಸ್. ಬಡಿಗೇರ, ವಿಶ್ವಕರ್ಮ ಮಹಿಳಾ ಮಂಡಳ ಅಧ್ಯಕ್ಷರಾದ ಶಿವಲೀಲಾ ಬಡಿಗೇರ, ಮಹಿಳಾ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ರಿಂದಮ್ಮ ನಾ. ವಡ್ಡಟ್ಟಿ, ಬಿ.ಎಂ. ಬಡಿಗೇರ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಆರಂಭದಲ್ಲಿ ನಾಗೇಂದ್ರಸ್ವಾಮಿಮಠ ಸಂಸ್ಕೃತ ಪಾಠಶಾಲೆ ವಟುಗಳು ವೇದಘೋಷ ಹೇಳಿದರು. ರೇಖಾ ಹಾಗೂ ಭಾರತಿ ಬಡಿಗೇರ ಪ್ರಾರ್ಥಿಸಿದರು. ಸಾಂಸ್ಕೃತಿಕ ಸಂಘದ ಅಧ್ಯಕ್ಷ ಮೌನೇಶ ಸಿ.ಬಡಿಗೇರ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಕಮ್ಮಾರ ನಿರೂಪಿಸಿದರು. ನಿರ್ದೇಶಕ ಬಿ.ಎಮ್. ಬಡಿಗೇರ ವಂದಿಸಿದರು.

ಅಧ್ಯಕ್ಷತೆವಹಿಸಿದ್ದ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ ಮಾತನಾಡಿ, ನಮ್ಮೆಲ್ಲರ ಕನಸಿನ ವಿಶ್ವಕರ್ಮ ಭವನ ಇಂದು ಲೋಕಾರ್ಪಣೆಗೊಂಡಿದೆ. ಇನ್ನು ಪಂಚ ಕಸಬುಗಳ ತರಬೇತಿ ಕೇಂದ್ರ ಹಾಗೂ ವಿದ್ಯಾರ್ಥಿ ವಸತಿ ನಿಲಯಗಳು ನಿರ್ಮಾಣವಾಗಬೇಕಿದೆ. ಹೀಗಾಗಿ ಸಮಾಜ ಬಾಂಧವರು ತಮ್ಮ ತನು, ಮನ, ಧನದ ಸಹಕಾರ ನೀಡಬೇಕು ಎಂದರು.

### ಶರೀಫ ಮತ್ತು ಕಬೀರರ ಕಾವ್ಯ ಸಾಮ್ಯತೆ ಕುರಿತ ಉಪನ್ಯಾಸದಲ್ಲಿ ಸುಮನ್ ಕುಲಕರ್ಣಿ ಅಭಿಪ್ರಾಯ

# ಸಮಾನತೆಗೆ ಒತ್ತು ನೀಡಿದ ಸಂತರು




■ವಿಜಯಸಾಕ್ಷಿ ಸುದ್ದಿ, ಗದಗ

ಸಂತ ಕಬೀರ ಹಾಗೂ ಶರೀಫರ ಬೋಧನೆಗಳು ಆಧ್ಯಾತ್ಮಿಕತೆಯ ಮಹತ್ವವನ್ನು ಎತ್ತಿ ತೋರಿಸುತ್ತವೆ. ಬದುಕಿನ ಕಾಲದಲ್ಲಿ ಶತಮಾನಗಳ ವ್ಯತ್ಯಾಸವಿದ್ದರೂ ವಿಚಾರಗಳಲ್ಲಿ ಸಾಮ್ಯತೆಯನ್ನು ಗುರುತಿಸಬಹುದಾಗಿದೆ. ಗುರುವಿನ ಮಾರ್ಗದರ್ಶನದಲ್ಲಿ ಅಂತರಂಗ ಶೋಧನೆಯ ಮೂಲಕ ಔನ್ನತ್ಯವನ್ನು ಸಾಧಿಸುವ ಮಾರ್ಗವನ್ನು ತೋರಿದ್ದಾರೆ ಎಂದು ಉಪನ್ಯಾಸಕಿ ಸುಮನ್ ಕುಲಕರ್ಣಿ ನುಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ತೋಂಟದ ಕ.ಸಾ.ಪ ಕಾರ್ಯಾಲಯದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಸಂತ ಶಿಶುನಾಳ ಶರೀಫರು ಮತ್ತು ಸಂತ ಕಬೀರರ ಕಾವ್ಯ ಸಾಮ್ಯತೆ ಕುರಿತು ಉಪನ್ಯಾಸ ನೀಡಿ ಮಾತನಾಡಿದರು.

ಇವರು ಸಾಂಪ್ರದಾಯಿಕ ಆಚರಣೆಗಳನ್ನು ತಿರಸ್ಕರಿಸಿದರು. ಆಧ್ಯಾತ್ಮಿಕ ಜ್ಞಾನವನ್ನು ಪಡೆಯಲು ಕಬೀರ ಮತ್ತು ಶರೀಫರು ಭಕ್ತಿ, ಪ್ರೀತಿ ಮತ್ತು ಧ್ಯಾನದ ಮಹತ್ವವನ್ನು ಒತ್ತಿ ಹೇಳಿದರು. ಪ್ರತಿಯೊಬ್ಬ ಮನುಷ್ಯನು ದೈವಿಕತೆಯ ಕಿಡಿಯನ್ನು ಹೊಂದಿದ್ದಾನೆ. ಅದರೊಂದಿಗೆ ಸಂಪರ್ಕ ಸಾಧಿಸಲು ಶ್ರಮಿಸಬೇಕು ಎಂದು ಅವರು ನಂಬಿದ್ದರು. ಅವರು ಜಾತಿ ವ್ಯವಸ್ಥೆ ಸಾಮಾಜಿಕ ಅಸಮಾನತೆಯನ್ನು ಟೀಕಿಸಿದರು. ಎಲ್ಲಾ ಮಾನವರ ಸಮಾನತೆಗೆ ಒತ್ತು ನೀಡಿದರು. ಇವರ ಬೋಧನೆಗಳು ಪ್ರೀತಿ, ಭಕ್ತಿ ಮತ್ತು ಸಾರ್ವತ್ರಿಕ ಸಹೋದರತ್ವದ ಮನೋಭಾವವನ್ನು ಒಳಗೊಂಡಿವೆ.

ರತ್ನಾ ಪುರಂತರ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿನ ಪ್ರತಿ ವಾರದ ಕಾರ್ಯಕ್ರಮಗಳು ವೈವಿಧ್ಯಮಯವಾಗಿ ನಡೆದುಕೊಂಡು ಬರುತ್ತಿವೆ. ಹೀಗೆಯೇ ನಿರಂತರತೆಯನ್ನು ಕಾಯ್ದುಕೊಂಡು ಸಾಹಿತ್ಯ ಪ್ರೇಮಿಗಳಿಗೆ ರಸಾನಂದವನ್ನು ಉಣಬಡಿಸುತ್ತಿರುವ ಗದಗ ಜಿಲ್ಲಾ ಕಸಾಪ ರಾಜ್ಯದಲ್ಲಿಯೇ ಮಾದರಿಯಾಗಿದೆ. ತಮ್ಮ ತಂದೆಯವರ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಸುವದಾಗಿ ಘೋಷಿಸಿದರು.

ವೇದಿಕೆ ಮೇಲೆ ಶ್ರೀಕಾಂತ ಬಡ್ಡೂರ, ಡಿ.ಎಸ್. ಬಾಪೂರಿ ಉಪಸ್ಥಿತರಿದ್ದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಶಿವಾನಂದ ಗಿಡ್ನಂದಿ ವಂದಿಸಿದರು. ಡಾ.ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು.

ಕೆ.ಎಚ್. ಬೇಲೂರ, ವಿ.ಎಸ್. ದಲಾಲಿ, ಶೇ.ಶಿ. ಕಳಸಾಪುರ, ಜಿ.ಎ. ಪಾಟೀಲ, ಡಾ. ಆರ್.ಎನ್. ಗೋಡಬೋಲೆ, ಸುರೇಶ ಕುಂಬಾರ, ಎಚ್.ಕೆ. ದಾಸರ, ಎಂ.ಎಫ್.ಡೋಣಿ, ಆರ್.ಡಿ. ಕಪ್ಪಲಿ, ಪಿ.ವಿ. ಇನಾಮದಾರ, ಪ್ರಶಾಂತ ಪಾಟೀಲ, ಆಯ್.ಬಿ. ಒಂಟೆಲಿ, ಶರಣಪ್ಪ ತಳವಾರ, ರಾಜಶೇಖರ ಕರಡಿ, ಕೆ.ಎಸ್. ಗುಗ್ಗರಿ, ಬಸವರಾಜ ವಾರಿ, ರಾಜೇಂದ್ರ ಬರದ್ವಾಡ, ಬಿ.ಬಿ. ಹೊಳಗುಂದಿ, ಬಸವರಾಜಗಣಪ್ಪನವರ, ಜಿ.ಎ. ಪಾಟೀಲ, ಶಶಿಕಾಂತ ಕೊರ್ಲಹಳ್ಳಿ, ಸಿ.ಎಂ. ಮಾರನಬಸರಿ, ಶಾಂತಾ ಗಣಪ್ಪನವರ, ಪ್ರೇಮಾ ಹೊನ್ನಗುಡಿ, ಎಸ್.ಎಂ. ಕಾತರಕಿ, ಎಸ್.ವಿ. ಬಳ್ಳಿ, ಎಸ್.ಬಿ. ಪಾಟೀಲ, ಪ್ರತೋ ನಾರಾಯಣಪುರ, ಅಶೋಕ ಸತ್ಯರಡ್ಡಿ, ರಾಜಶೇಖರ ಕರಡಿ, ಬಿ.ಎಸ್. ಹಿಂಡಿ, ಸತೀಶಕುಮಾರ ಚನ್ನಪ್ಪಗೌಡ, ಬಸವರಾಜ ವಾರಿ, ಆರ್.ಡಿ. ಕಪ್ಪಲಿ, ಎಚ್.ಟಿ. ಸಂಜೀವಸ್ವಾಮಿ, ಬಿ.ಬಿ. ಹೊಳಗುಂದಿ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿ ವಿವೇಕಾನಂದಗೌಡ ಪಾಟೀಲ ಮಾತನಾಡಿ, ನಮ್ಮ ಆಧ್ಯಾತ್ಮಿಕ ಪರಂಪರೆಯ ಮೂಲ ಉದ್ದೇಶ ಒಂದೇ ಪ್ರಶ್ನೆ ನಾನು ಯಾರು ಎನ್ನುವುದಾಗಿದೆ. ಅದಕ್ಕೆ ಉತ್ತರ ಕಂಡುಕೊಳ್ಳಲು ವೇದಗಳು, ಉಪನಿಷತ್ತುಗಳು, ದ್ವೈತ-ಅದ್ವೈತ-ವಿಶಿಷ್ಟಾದ್ವೈತ, ಶಕ್ತಿ ವಿಶಿಷ್ಟಾದ್ವೈತಗಳು ಹುಟ್ಟಿಕೊಂಡವು. ಇವರೆಲ್ಲರ ಸಿದ್ಧಾಂತ ಎಲ್ಲಿಂದ ಬಂದಿರುವವೋ ಅಲ್ಲಿಗೆ ಸೇರುವುದಾಗಿದೆ ಎಂದು ತಿಳಿಸಿದರು.

# ಎಲ್ಲರನ್ನೂ ಸಹೋದರರಂತೆ ಕಾಣಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ತ್ಯಾಗ, ಬಲಿದಾನದ ಸಂಕೇತ ಬಕ್ರೀದ್ ಹಬ್ಬವಾಗಿದೆ ಎಂದು ಮುಸ್ಲಿಂ ಧರ್ಮಗುರು ಇಸ್ಮಾಯಿಲ್ ಖಾಜಿ ಹೇಳಿದರು.

ಅವರು ಪಟ್ಟಣದ ಈದ್ಗಾ ಮೈದಾನದಲ್ಲಿ ಸೋಮವಾರ ಬಕ್ರೀದ್ ಹಬ್ಬದ ನಿಮಿತ್ತ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ ನಂತರ ಮಾತನಾಡಿ, ಬಕ್ರೀದ್ ಹಬ್ಬವು ತ್ಯಾಗ, ಬಲಿದಾನದ ಸಂಕೇತವಾಗಿದ್ದು, ನಾವೆಲ್ಲರೂ ಸಹೋದರರಂತೆ ಬಾಳಬೇಕು. ನಮ್ಮ ಕಾಯಕದಲ್ಲಿನ ಸ್ವಲ್ಪವನ್ನಾದರೂ ದಾನ, ಧರ್ಮ ಮಾಡಬೇಕು. ನಾವೆಲ್ಲರೂ ಶಾಂತಿ-ಸೌಹಾರ್ದತೆಯಿಂದ ಬಾಳಬೇಕು. ಬಡವರು, ದೀನ-ದಲಿತರು ಎಲ್ಲರನ್ನು ನಮ್ಮ ಸಹೋದರ-ಸಹೋದರಿಯರಂತೆ ಕಾಣಬೇಕು. ಮುಸ್ಲಿಂ ಬಾಂಧವರಿಗೆ ಈ ಹಬ್ಬವು ಪವಿತ್ರವಾದದ್ದು ಎಂದರು.

ಪಟ್ಟಣದ ಈದ್ಗಾ ಮೈದಾನದಲ್ಲಿ ವೃದ್ಧರಿಂದ ಹಿಡಿದು ಚಿಕ್ಕಮಕ್ಕಳು ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು. ಇಮಾಮಸಾಬ ಖವಾಸ, ಬಾಬುಸಾಬ ಖಲೀಪನವರ, ಎಚ್.ಎಂ. ನದ್ದಿಮುಲ್ಲಾ, ಹೈದರಲಿ ಖವಾಸ, ರಾಜೇಸಾಬ ಸೈಯದಬಡೆ, ತಾಜುದ್ದಿನ್ ಕಿಂಡ್ರಿ, ಇಮಾಮಸಾಬ ಶೇಖ, ಸೈಯದಲಿ ಶೇಖ, ಎಂ.ಎಂ. ಹುಬ್ಬಳ್ಳಿ, ಖಲಂದರ ಗಾಡಿ, ದಾದಾಖಲಂದರ ಹೊಂಬಳ, ಮೌಲಾಸಾಬ ಸದರಭಾವಿ, ಇಬ್ರಾಹಿಂಸಾಬ ಹಣಗಿ, ಮುನ್ನಾ ಡಾಲಾಯತ, ದಾವುದ ಜಮಾಲ, ಜಮನಸಾಬ ಹಾದಿಮನಿ, ಎ.ಡಿ. ಮುಜಾವಾರ,ಡಿ.ಡಿ. ಮುಜಾವಾರ, ಮಹ್ಮದ್ ಭಾವಿಕಟ್ಟಿ, ಆಸ್ಪಾಕ್ ಕಮಲ್ಲಣ್ಣವರ ಇದ್ದರು.

# ಬಕ್ರೀದ್ ನಿಮಿತ್ತ ಸಾಮೂಹಿಕ ಪ್ರಾರ್ಥನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತ್ಯಾಗ ಮತ್ತು ಬಲಿದಾನಗಳ ಪ್ರತೀಕವಾದ ಬಕ್ರೀದ್ ಹಬ್ಬವನ್ನು ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಊರುಗಳಲ್ಲಿ ಮುಸ್ಲಿಂ ಬಾಂಧವರು ಸೋಮವಾರ ಭಕ್ತಿ-ಶ್ರದ್ಧೆಯಿಂದ ಆಚರಿಸಿದರು.

ಹಬ್ಬದ ನಿಮಿತ್ತ ಲಕ್ಷ್ಮೇಶ್ವರದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು.



ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಪ್ರಾರ್ಥನೆಯಲ್ಲಿ ತೊಡಗಿದ್ದು, ರವಿವಾರ ಮುಸ್ಲಿಂ ಬಾಂಧವರು ಬಕ್ರೀದ ಹಬ್ಬದ ಹಿನ್ನೆಲೆಯಲ್ಲಿ ಸ್ಮಶಾನಗಳಲ್ಲಿನ ಹಿರಿಯರ ಗೋರಿಗಳನ್ನು ಯುವ ಸಮೂಹ ಸ್ವಚ್ಛಗೊಳಿಸುವ ಕಾರ್ಯವನ್ನು ಕೈಗೊಂಡು, ಬಕ್ರೀದ್ ದಿವಸ ಜಾಗೆಗೆ ತೆರಳಿ ಪ್ರಾರ್ಥನೆ ಸಲ್ಲಿಸಿದರು.

ಧಾನ, ಧರ್ಮದ ಮಹತ್ವವನ್ನು ಸಾರುವ ಬಕ್ರೀದ ಹಬ್ಬವನ್ನು ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಶ್ರದ್ಧಾ-ಭಕ್ತಿಯಿಂದ ನೆರವೇರಿಸಲಾಯಿತು. ಪಟ್ಟಣದಲ್ಲಿ ಬಕ್ರೀದ ಹಬ್ಬದ ಪ್ರಯುಕ್ತ ಮುಸ್ಲಿಂ ಬಾಂಧವರು ಹೊಸ ಬಟ್ಟೆಗಳನ್ನು ತೊಟ್ಟು ಸಂಭ್ರಮದಿಂದ ಈದ್ಗಾ ಮೈದಾನಕ್ಕೆ ಆಗಮಿಸಿದ್ದರು.

ಅಪಾರ ಸಂಖ್ಯೆಯಲ್ಲಿ ನೆರದಿದ್ದ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ ಬಳಿಕ ಧರ್ಮ ಗುರುಗಳು ಬಕ್ರೀದ ಹಬ್ಬದ ಆಚರಣೆ ಮತ್ತು ಧಾನ-ಧರ್ಮದ ಕುರಿತು ಬೋಧನೆ ಮಾಡಿದರು. ನಂತರ ಸಮಾಜದ ಬಾಂಧವರು ಪರಸ್ಪರ ಆಲಂಗಿಸಿಕೊಂಡು ಶುಭಾಷಯ ವಿನಿಮಯ ಮಾಡಿಕೊಂಡರು.

# ಜೀವನದಲ್ಲಿ ಸೌಹಾರ್ದತೆ ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ರೋಣ

ಮುಸ್ಲಿಂರು ಸಹೋದರತೆ ಹಾಗೂ ಸೌಹಾರ್ದತೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮೌಲಾನ ಮಲೀಕ್ ಹೇಳಿದರು. ಅವರು ಸೋಮವಾರ ಮಾರನಬಸರಿ ಗ್ರಾಮದ ಈದ್ಗಾ ಮೈದಾನದಲ್ಲಿ ಜರುಗಿದ ಬಕ್ರೀದ್ ಹಬ್ಬದ ಸಾಮೂಹಿಕ ಪ್ರಾರ್ಥನೆಯ ನೇತೃತ್ವ ವಹಿಸಿ ಮಾತನಾಡಿದರು.



ಇಸ್ಲಾಂ ಧರ್ಮವು ಶಾಂತಿ ಮತ್ತು ಸಹೋದರತೆಯನ್ನು ಪ್ರತಿಪಾದಿಸುತ್ತದೆ ಎಂಬ ಸತ್ಯವನ್ನು ನಾವು ಮೊದಲು ಅರಿತುಕೊಳ್ಳಬೇಕು. ನಮ್ಮಲ್ಲಿ ಅಡಕವಾಗಿರುವ ಕೆಟ್ಟ ಆಲೋಚನೆಗಳಿಂದ ಹೊರ ಬಂದು ಸಮಾಜದ ಹಾಗೂ ಸಮುದಾಯದ ಒಳಿತಿಗಾಗಿ ಶ್ರಮಿಸಬೇಕು. ಮುಸ್ಲಿಂರಿಗೆ ಬಕ್ರೀದ್ ಹಬ್ಬವು ಅತ್ಯಂತ ಪವಿತ್ರವಾಗಿದ್ದು, ನಾವು ದುಶ್ಚಟಗಳಿಂದ ವಿಮುಕ್ತರಾಬೇಕಿದೆ. ನಮ್ಮ ಬದುಕು ಧರ್ಮದ ತಳಹದಿಯಲ್ಲಿ ಸಾಗಬೇಕಿದ್ದು, ಮುಸ್ಲಿಂರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಜೊತೆಗೆ ದಿನಕ್ಕೆ ಐದು ಬಾರಿ ಪ್ರಾರ್ಥನೆ ಕೂಡ ಸಲ್ಲಿಸಬೇಕು. ಇದರಿಂದ ಮನಸ್ಸಿಗೆ ನೆಮ್ಮದಿ ದೊರಕುತ್ತದೆ ಎಂದರು. ಇದ್ಕಕೂ ಮೊದಲು ಜುಮ್ಮಾ ಮಸೀದಿಯಿಂದ ದೇವರ ನಾಮ ಸ್ಮರಣೆ ಮಾಡುತ್ತಾ ಪ್ರಮುಖ ಬಿದಿಗಳಲ್ಲಿ ಸಂಚರಿಸಿ ಹೊರವಲಯದಲ್ಲಿರುವ ಈದ್ಗಾ ಮೈದಾನಕ್ಕೆ ತೆರಳಿದರು. ಪ್ರಾರ್ಥನೆಯ ನಂತರ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡರು.

ಕಾಶೀಮಸಾಬ ದೋಟಿಹಾಳ, ರೈಮಾನಸಾಬ ಮೋತೆಖಾನ್, ಬಾಬು ಅತ್ತಾರ, ಮೌಲಾಸಾಬ ಸವಡಿ, ಪಕ್ರುಸಾಬ ಹಜರತನವರ, ಬಾಬು ಮೋತೆಖಾನ್, ಅಲ್ಲಿಸಾಬ ಸವಡಿ, ಖಾಧಿರಸಾಬ ಕಳಕಾಪೂರ, ನಭಿಸಾಬ ಹುಡೇದ, ರಿಯಾಜ ಆಲೂರ, ಅಲ್ಲಾಸಾಬ ಮೋತೆಖಾನ್, ಹುಸೇನಸಾಬ ಹುಡೇದ, ದಸ್ತಗೀರಸಾಬ ದೋಟಿಹಾಳ ಸೇರಿದಂತೆ ನೂರಾರು ಮುಸ್ಲಿಂರು ಪಾಲ್ಗೊಂಡಿದ್ದರು.



ಲಕ್ಷ್ಮೇಶ್ವರ ಸಮೀಪದ ಬಸವನಕೊಪ್ಪ ಗ್ರಾಮದ ಆರಾಧ್ಯದೈವ ಬಸನಕೊಪ್ಪ ಬಸವಣ್ಣ ದೇವರ ಜಾತ್ರಾ ಮಹೋತ್ಸವ ಅಂಗವಾಗಿ ಜೂನ್ 18ರಂದು ಸಂಜೆ 5 ಗಂಟೆಗೆ ಕಡುಬಿನ ಕಾಳಗ ಜರುಗುವುದು. ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಸುತ್ತಮುತ್ತಲಿನ ಗ್ರಾಮದಿಂದ ಅಪಾರ ಭಕ್ತ ಸಮೂಹ ಪಾಲ್ಗೊಳ್ಳಲಿದೆ ಎಂದು ಜಾತ್ರಾ ಕಮಿಟಿ ತಿಳಿಸಿದೆ.



ಗದುಗಿನ ವಿಜಯ ನಗರ ಬಡಾವಣೆಯಲ್ಲಿ ನೂತನವಾಗಿ ನಿರ್ಮಾಣವಾದ ಶ್ರೀ ವಿಶ್ವಕರ್ಮ ಭವನವನ್ನು ಉಡುಪಿಯ ಕಡಪಾಡಿ ಪಡುಕುತ್ಯಾರು ಸರಸ್ವತಿ ಪೀಠದ ಪೂಜ್ಯ ಜಗದ್ಗುರು ಅನಂತ ಶ್ರೀ ವಿಭೂಶಿತ ಕಾಳಹಸ್ತೇಂದ್ರ ಮಹಾಸ್ವಾಮೀಜಿ ಉದ್ಘಾಟಿಸಿದರು. ಗದಗ ಎಪಿಎಂಸಿ ಸದಸ್ಯ ಅಪ್ಪಣ್ಣ ಇನಾಮತಿ, ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ, ಗಣ್ಯರಾದ ಕೆ.ಡಿ. ಬಡಿಗೇರ, ಪಿ.ಬಿ. ಬಡಿಗೇರ, ಎ.ಆರ್. ಬಡಿಗೇರ, ನಿರಂಜನ ಎನ್.ಬಡಿಗೇರ, ಎ.ಎನ್. ಬಡಿಗೇರ ಉಪಸ್ಥಿತರಿದ್ದರು.

## ನಿಧನ ವಾರ್ತೆ



**ಶಾಂತವ್ವ ಅಂಕದ**

**ಡಂಬಳ:** ಇಲ್ಲಿಯ ಹಿರೇವಡ್ಡಟ್ಟಿ ಗ್ರಾಮದ ಪಂಚಮಸಾಲಿ ಸಮಾಜದ ಹಿರಿಯರಾದ ಶಾಂತವ್ವ ಷಣ್ಮುಖಪ್ಪ ಅಂಕದ (72) ರವಿವಾರ ನಿಧನರಾದರು. ಇಬ್ಬರು ಗಂಡು ಮಕ್ಕಳು, ಸೊಸೆಯಂದಿರರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ನಿಧನಕ್ಕೆ ಕರಣ ಬಂಡಿ, ಕರಬಸ್ಸಪ್ಪ ಹಂಚಿನಾಳ, ರವಿ ಉಪ್ಪಿನಬೇಟಗೇರಿ, ಬೀರಪ್ಪ ಬಂಡಿ, ಶರಣಪ್ಪ ನಂದಿಕೋಲ, ಎಸ್.ಜಿ. ಗುರವಿನ, ವೆಂಕನಗೌಡ ಪಾಟೀಲ, ಮುದ್ಲಿಂಗಪ್ಪ ಕೊರ್ಲಹಳ್ಳಿ, ರವಿ ಕರಿಗಾರ, ಎಸ್.ವಿ. ಪಾಟೀಲ, ಅಂದಪ್ಪ ಹಾರೂಗೇರಿ, ಹನಮರಡ್ಡಿ ಮೇಟಿ, ಅಬ್ದುಲ್ ಕಲಕೇರಿ, ನಾಗರಾಜ ಕಾಟರಳ್ಳಿ ಸೇರಿದಂತೆ ಸಮಾಜದ ಮುಖಂಡರು ತೀವ್ರ ಸಂತಾಪ ಸೂಚಿಸಿದ್ದಾರೆ.

### ಡಂಬಳ ಗ್ರಾಮದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ

# ತತ್ವಾದರ್ಶಗಳನ್ನು ಆಚರಿಸುವ ಹಬ್ಬ ಬಕ್ರೀದ್

■ವಿಜಯಸಾಕ್ಷಿ ಸುದ್ದಿ, ಡಂಬಳ

ಬಕ್ರೀದ್ ತ್ಯಾಗ, ಬಲಿದಾನಗಳ ಸಂಕೇತವಾಗಿದೆ. ತ್ಯಾಗ, ಸಹನೆ ಮತ್ತು ಪರಿಶ್ರಮವೆಂಬ ಮೂರು ಉನ್ನತ ತತ್ವಾದರ್ಶಗಳನ್ನು ಬಕ್ರೀದಿನ ಇತಿಹಾಸ ವಿಶ್ವದ ಜನತೆಗೆ ಸಾರುತ್ತದೆ. ಪರರ ಒಳಿತಿಗಾಗಿ ತ್ಯಾಗ, ಕಷ್ಟಗಳ ಮುಂದೆ ಸಹನೆ ಮತ್ತು ಸಾಮಾಜಿಕ ಹಿತಾಸಕ್ತಿಗಾಗಿ ಪರಿಶ್ರಮ ಎಂಬ ಉದಾತ್ತ ಆದರ್ಶಗಳೊಂದಿಗೆ ಇಂದು ಬಕ್ರೀದನ್ನು ಮುಸ್ಲಿಮರು ವಿಶ್ವದಾದ್ಯಂತ ಆಚರಿಸುತ್ತಾರೆ ಎಂದು ಧರ್ಮಗುರು ಖಾದರಸಾಬ ಮುಲ್ಲಾ ಹೇಳಿದರು.

ಡಂಬಳ ಗ್ರಾಮದ ಈದ್ಗಾ ಮೈದಾನದಲ್ಲಿ ಮುಸ್ಲಿಂ ಸಮಾಜದವರು ಈದ್-ಉಲ್-ಅಧಾವನ್ನು ಅರಾಫತ್ ದಿನವಾದ ಹಜ್‌ನ ಮುಖ್ಯ ಆಚರಣೆಯ ಪ್ರತೀಕ ಆಚರಿಸಲಾಗುವ ಹಬ್ಬವನ್ನು ಸಾಮೂಹಿಕ ಪ್ರಾರ್ಥನೆಯ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.



ಒಂದು ದಿನ ಇಬ್ರಾಹಿಂ ಅವರ ಕನಸಿನಲ್ಲಿ ಬಂದ ಅಲ್ಲಾಹು ನಿನಗೆ ಅಮೂಲ್ಯ ಎನಿಸುವುದನ್ನು ನನಗೆ ಸಮರ್ಪಿಸು ಎಂದು ಆದೇಶಿಸುತ್ತಾರೆ. ಹೀಗಾಗಿ ತಮಗೆ ಅಮೂಲ್ಯವಾಗಿರುವ ಹಾಗೂ ಏಕೈಕ ಪುತ್ರ ಇಸ್ಮಾಯಿಲ್ ಅವರನ್ನು ಬಲಿ ನೀಡಲು ಇಬ್ರಾಹಿಂ ನಿರ್ಧರಿಸುತ್ತಾರೆ. ಇಸ್ಮಾಯಿಲ್ ಕತ್ತಿನ ಮೇಲೆ ಎಷ್ಟೇ ಸಲ ಕತ್ತಿ ಚಲಾಯಿಸಿದರೂ ಅದು ಹರಿಯುವುದಿಲ್ಲ. ಪುತ್ರ ವಾತ್ಸಲ್ಯದಿಂದ ಹೀಗಾಗುತ್ತಿದೆ ಎಂದುಕೊಂಡ ಇಬ್ರಾಹಿಂ ಅವರು ತಮ್ಮ ಕಣ್ಣುಗಳಿಗೆ ಬಟ್ಟೆ ಕಟ್ಟಿಕೊಂಡು ಕತ್ತಿ ಪ್ರಯೋಗಿಸುತ್ತಾರೆ. ಅಷ್ಟೊತ್ತಿಗೆ ಆತನ ಪರೀಕ್ಷೆ ನಿಲ್ಲಿಸಿದ್ದ ಅಲ್ಲಾಹು ಜಿಬ್ರಾಯಿಲ್‌ನನ್ನು ಕಳುಹಿಸಿರುತ್ತಾನೆ. ಜಿಬ್ರಾಯಿಲ್ ಅವರು ಬಂದು ಇಸ್ಮಾಯಿಲ್ ಅವರ ಜಾಗದಲ್ಲಿ ಕುರಿಯೊಂದನ್ನು ಇಟ್ಟಿರುತ್ತಾರೆ. ಇಬ್ರಾಹಿಂ ಕಣ್ತೆರೆದಾಗ ಅಲ್ಲಿ ಕುರಿಯ ಬಲಿ ನಡೆದಿತ್ತು. ಅಲ್ಲಾಹು ಒಡ್ಡಿದ ಸತ್ವ ಪರೀಕ್ಷೆಯನ್ನು ಇಬ್ರಾಹಿಂ ಗೆದ್ದಿದ್ದರು. ಅಂದಿನಿಂದ ಬಲಿ ಕರ್ಮ ಇಸ್ಲಾಮಿನ ಭಾಗವಾಗಿದ್ದು ಬಕ್ರೀದ್ ದಿನ ಪ್ರಾಣಿ ಬಲಿ ನೀಡಲಾಗುತ್ತಿದೆ ಎಂದು ಬಕ್ರೀದ್ ಆಚರಣೆಯ ಹಿನ್ನೆಲೆಯ ಕುರಿತು ಹೇಳಿದರು.

ಪ್ರಾರ್ಥನೆಯಲ್ಲಿ ಅಂಜುಮನ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ, ಖಾಜಾಹುಸೇನ ಹೋಸಪೇಟಿ, ಮೋಹದ್ದಿನ ಅಳವುಂಡಿ, ಅಲ್ಲಿಸಾಬ ಸರಕಾವಾಸ, ಹುಸೇನಸಾಬ ಮೂಲಿಮನಿ, ನೂರಹಮ್ಮದ ಸರಕಾವಾಸ, ಬುಡ್ನೆಸಾಬ ಜಲಾಲನವರ, ಬಾಬುಸಾಬ ಸರಕಾವಾಸ, ಜಾಕೀರ ಮೂಲಿಮನಿ, ಅಲ್ಲಾವುದ್ದೀನ್ ಹೊಂಬಳ, ಮಹಮ್ಮದರಫೀಕಸಾಬ ಹೋಸಪೇಟಿ, ಹುಸೇನಸಾಬ ಹೊಸಬಾವಿ, ರಜಾಕಸಾಬ ದೊಡ್ಡಮನಿ, ಪೀರಸಾಬ ಮಕಾಂದಾರ, ಬುಡ್ನೆಸಾಬ ಅತ್ತಾರ, ರಾಯಸಾಬ ಕಾಸ್ತಾರ, ಇಬ್ರಾಹಿಂಸಾಬ ಸರಕಾವಾಸ, ರಜಾಕಸಾಬ ತಾಂಬೋಟಿ, ರಫೀಕ ಮನಿಯಾರ, ಚಾಂದಸಾಬ ಮಿರ್ಜಾನವರ, ಬಾಬುಸಾಬ ಸರಕಾವಾಸ, ಎಮ್.ಆರ್. ಆಲೂರ, ಇಬ್ರಾಹಿಂ ಹೊಸಪೇಟಿ ಮುಂತಾದವರಿದ್ದರು.

ಪ್ರವಾದಿ ಇಬ್ರಾಹಿಂ ಅವರು ಅಲ್ಲಾಹುವಿನ ಆಪ್ತರು. ಅಲ್ಲಾಹು ಒಡ್ಡಿದ ಹಲವು ಬಗೆಯ ಪರೀಕ್ಷೆಗಳಲ್ಲಿ ಜಯಿಸಿದವರು. ಅಲ್ಲಾಹುವಿನ ಇಚ್ಛೆಯಂತೆ ಎಲ್ಲ ಪ್ರೀತಿಯ ವಸ್ತುಗಳನ್ನು ತ್ಯಾಗ ಮಾಡಿದವರು ಎಂದು ನಂಬಲಾಗುತ್ತದೆ ಎಂದು ಧರ್ಮಗುರು ಖಾದರಸಾಬ ಮುಲ್ಲಾ ಹೇಳಿದರು.

**ಸಾರ್ವಜನಿಕ ಆಡಳಿತದಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ, ಕಾನೂನು ಸೇವೆಗಳ ಪ್ರಾಧಿಕಾರದ ಪಾತ್ರ' ಸಂವಾದ**

# ನ್ಯಾಯದಾನ ಕಾರ್ಯ ದೇವರ ಕೆಲಸ

■ವಿಜಯಸಾಕ್ಷಿ ಸುದ್ದಿ, ಗದಗ

ಅರ್ಹರಿಗೆ ನ್ಯಾಯದಾನ ಮಾಡುವ ವ್ಯವಸ್ಥೆ ದೇವರ ಕೆಲಸಕ್ಕೆ ಸಮವಾದದ್ದು ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ರವಿವಾರ 'ಸಾರ್ವಜನಿಕ ಆಡಳಿತದಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಮತ್ತು ಕಾನೂನು ಸೇವೆಗಳ ಪ್ರಾಧಿಕಾರದ ಪಾತ್ರ' ಕುರಿತು ನಡೆದ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ಲೋಕಾಯುಕ್ತ ಸಂಸ್ಥೆ ಮತ್ತು ಕಾನೂನು ಸೇವೆಗಳ ಪ್ರಾಧಿಕಾರದವನ್ನು ಬೇರೆ ಇಲಾಖೆಗಳಿಗೆ ಹೋಲಿಸಿದರೆ ತುಂಬಾ ವ್ಯತ್ಯಾಸವಿದ್ದು, ಸಾರ್ವಜನಿಕರು ಇದನ್ನು ಗೌರವ ಮತ್ತು ವಿಶ್ವಾಸದಿಂದ ಕಾಣುತ್ತಾರೆ. ಅದನ್ನು ಉಳಿಸಿಕೊಳ್ಳುವ ಜವಬ್ದಾರಿ ನಮ್ಮ ಮೇಲಿದೆ. ಯಾರಿಗೂ ಅನ್ಯಾಯ ವಾಗದಂತೆ ಕೂಲಂಕಷವಾಗಿ ಪರಿಶೀಲಿಸಿ ಅರ್ಹರಿಗೆ ನ್ಯಾಯ ದಾನ ಮಾಡೋಣ ಎಂದು ಹೇಳಿದರು.

ಈಗಾಗಲೇ ಲೋಕ ಅದಾಲತ್ ಮೂಲಕ ಹಲವಾರು ಸಮಸ್ಯೆಗಳಿಗೆ ಪರಿಹಾರ ಸಿಕ್ಕು ಅನೇಕ ಅರ್ಹರಿಗೆ ನ್ಯಾಯ ಒದಗಿದೆ. ಕಾನೂನು ಸೇವಾ ಪ್ರಾಧಿಕಾರದಿಂದ ಜರಗುವ ಕಾನೂನು ಅರಿವು ಕಾರ್ಯಕ್ರಮದ ಮೂಲಕ ಜನರಿಗೆ ಕಾನೂನಿನ ಜಾಗೃತಿ ಮೂಡಿಸಿ ಅನೇಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಹಕಾರಿಯಾಗಿದೆ ಎಂದರು.

ಕಾನೂನು ಸೇವಾ ಪ್ರಾಧಿಕಾರದಿಂದ ಲೋಕಾಯುಕ್ತ ಕಾನೂನು ಕುರಿತು ಜಿಲ್ಲಾ, ತಾಲೂಕು ಮಟ್ಟದಲ್ಲಿ ಅರಿವು ಮೂಡಿಸಿ ಯಾವುದೇ ಅರ್ಜಿ ಬಂದಲ್ಲಿ ಪರಿಹಾರ ನೀಡಿ, ಸಾಧ್ಯವಾಗದಿದ್ದಲ್ಲಿ ಲೋಕಾಯುಕ್ತ ಕಚೇರಿಗೆ ಕಳುಹಿಸಿ. ಕರ್ನಾಟಕ ಲೋಕಾಯುಕ್ತ ಸಂಸ್ಥೆ ಮತ್ತು ಕಾನೂನು ಸೇವೆಗಳ ಪ್ರಾಧಿಕಾರವು ಸಮಸ್ಯೆಗಳ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡೋಣ ಎಂದರು.

ಜಿಲ್ಲಾ ಸತ್ರ ನ್ಯಾಯಾಧೀಶರಾದ ಬಸವರಾಜ ಮಾತನಾಡಿ,



ಕರ್ನಾಟಕ ಲೋಕಾಯುಕ್ತ ಸಂಸ್ಥೆ ಮತ್ತು ಕಾನೂನು ಸೇವೆಗಳ ಪ್ರಾಧಿಕಾರದ ವ್ಯಾಪ್ತಿಯು ಅಪರಿಮಿತವಾಗಿದ್ದು, ಅದನ್ನು ಸದ್ಬಳಕೆ ಮಾಡಿ ಸಮನ್ವಯದಿಂದ ಕಾರ್ಯನಿರ್ವಹಿಸಿ, ದೂರುಗಳಿಗೆ ಶೀಘ್ರ ಪರಿಹಾರ ಕಂಡುಕೊಂಡು ದೇಶದ ಉನ್ನತಿಗೆ ಶ್ರಮಿಸೋಣ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಲೋಕಾಯುಕ್ತ ಸಂಪನ್ಮೂಲ ಅಧಿಕಾರಿ ಪ್ರಕಾಶ ಎಲ್.ನಾಡಗೇರ, ಕರ್ನಾಟಕ ಲೋಕಾಯುಕ್ತ ಉಪನಿಬಂಧ'ಕರಾದ ಅಮರನಾರಾಯಣ ಕೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ, ಉಪಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಕಿರಣ ಪಿ.ಎಂ. ಪಾಟೀಲ, ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧೀಕ್ಷಕ ಸತೀಶ ಚಿಟಗುಬ್ಬಿ, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಜಿ.ಎಸ್. ಪಲ್ಲೇದ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮತ್ತ ತಾಲೂಕುಗಳ ನ್ಯಾಯಾಧೀಶರು ಹಾಜರಿದ್ದರು.

> ಯಾವುದೇ ಒಂದು ಪ್ರಕರಣದಲ್ಲಿ ಒಂದು ಕುಟುಂಬಕ್ಕೆ ಸಕಾಲದಲ್ಲಿ ಸರಿಯಾಗಿ ಪರಿಹಾರ ದೊರೆಯದಿದ್ದರೆ ಅಂತಹ ಕುಟುಂಬಗಳು ಬೀದಿಗೆ ಬರಬಹುದು ಅಥವಾ ಕುಟುಂಬದ ನಿರ್ವಹಣೆಗೆ ಅಡ್ಡದಾರಿ ಹಿಡಿಯಬಹುದು. ಹಾಗಾಗಿ ಲೋಕಾಯುಕ್ತ ಮತ್ತು ಕಾನೂನು ಸೇವಾ ಪ್ರಾಧಿಕಾರದ ದೂರಿನ ಅನ್ವಯ ತನಿಖೆ ನಡೆಸಿ ಸರಿಪಡಿಸಲು ಅವಕಾಶವಿದೆ, ತಪ್ಪು ಮಾಡಿದ ಅಧಿಕಾರಿಗಳಿಗೆ ದಂಡ ಮತ್ತು ಶಿಕ್ಷೆ ವಿಧಿಸಲು ಅವಕಾಶವಿದೆ ಎಂದು ಕೆ.ಎನ್. ಫಣೀಂದ್ರ ಹೇಳಿದರು.

ಕಾರ್ಯಕ್ರಮವನ್ನು ಬಸವರಾಜ ಕುಕನೂರು ನಿರ್ವಹಿಸಿದರು.



# ಪ್ರೊ. ರವೀಂದ್ರ ಕೊಪ್ಪರ ಜನ್ಮ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಾಹಿತಿ ಹಾಗೂ ಕೊಪ್ಪರ ಅಕಾಡೆಮಿ ಅಧ್ಯಕ್ಷರಾಗಿದ್ದ ಪ್ರೊ. ರವೀಂದ್ರ ಕೊಪ್ಪರ ಅವರ 78ನೇ ಜನ್ಮ ದಿನಾಚರಣೆಯನ್ನು ಕೊಪ್ಪರ ಅಕಾಡೆಮಿಯಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ನಿವೃತ್ತ ಪ್ರೊಫೆಸರ್ ವಿ.ಬಿ. ತಾಳಿ, ಕೊಪ್ಪರ ಜೊತೆಗಿನ ಬಾಂಧವ್ಯ ಹಾಗೂ ಅವರ ಶಿಸ್ತಿನ ಜೀವನ ಶೈಲಿ ಬಗ್ಗೆ ಮಾತನಾಡಿದರು.

ಕೊಪ್ಪರರ ಶಿಷ್ಯ ಪಿಡಿಒ ಅಮೀರ ನಾಯಕ್, ಮುರಾಧಖಾನ್, ನಿವೃತ್ತ ವೈದ್ಯಾಧಿಕಾರಿ ಯಶೋಧಾ ಭಜಂತ್ರಿ, ಮಲ್ಲಿಕಾರ್ಜುನ ಖಂಡೆಮ್ಮನವರ ಮಾತನಾಡಿದರು.

ಕುಮಾರ ಸ್ವಾಮಿ ಹಾಗೂ ಜಲಮೂಲ ತಜ್ಞರಾದ ಮಲ್ಲಿಕಾರ್ಜುನ ಪ್ರಾರ್ಥನೆ ಮಾಡಿದರು. ಕೊಪ್ಪರ ಅವರ ಪುತ್ರರಾದ ರಘು ಕೊಪ್ಪರ ಹಾಗೂ ಶ್ರೀಕಾಂತ ಕೊಪ್ಪರ ಆಗಮಿಸಿದವರಿಗೆ ಧನ್ಯವಾದಗಳನ್ನು ಅರ್ಪಿಸಿದರು. ಶಿಲ್ಪ ಕೊಪ್ಪರ, ವಿಹಾನ ಕೊಪ್ಪರ, ಸುನಿಲ ಹಲಕುರ್ಕಿ, ಮಲ್ಲಿಕಾರ್ಜುನ ಹಡ್ಕರ್, ಕುಮಾರ ಗುತ್ತರಗಿ, ಮುರಾಧಖಾನ, ನಿವೃತ್ತ ಪೊಲೀಸ್ ಅಧಿಕಾರಿ ವಾದಿರಾಜ ಕೌಜಲಗಿ, ಹರೀಶ, ವಿರುಪಾಕ್ಷಿ ಹಿರೇಮಠ, ದಯಾನಂದ ತಡಸ ಮುಂತಾದವರು ಭಾಗವಹಿಸಿದ್ದರು.

# ಭರತನಾಟ್ಯ ಪರೀಕ್ಷೆಯಲ್ಲಿ ರಾಜ್ಯಕ್ಕೆ 2ನೇ ಸ್ಥಾನ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಕಲಾ ವೈಭವ ಹಾಗೂ ಕಲಾ ವಿವಿಧೋದ್ದೇಶಗಳ ಸಂಸ್ಥೆಯ ನಿರ್ದೇಶಕಿ ಹಾಗೂ ಭರತನಾಟ್ಯ ಕಲಾವಿದೆಯಾಗಿ ಹೆಸರು ಮಾಡಿರುವ ಭವ್ಯ ಸೋಮನಾಥ ಕತ್ತಿ ಎಪ್ರಿಲ್/ಮೇ ತಿಂಗಳಲ್ಲಿ ಗಂಧರ್ವ ಮಹಾವಿದ್ಯಾಲಯ ನಡೆಸಿದ ಭರತನಾಟ್ಯ ವಿಭಾಗದ ವಿಶಾರದ ಪೂರ್ಣ ಪರೀಕ್ಷೆಯಲ್ಲಿ 635 ಅಂಕಗಳನ್ನು ಗಳಿಸುವ ಮೂಲಕ ರಾಜ್ಯಕ್ಕೆ 2ನೇ ಸ್ಥಾನ ಪಡೆದುಕೊಂಡಿದ್ದಾರೆ.

ಪ್ರಸ್ತುತ ಭವ್ಯ ಅವರು ಪಟ್ಟಣದಲ್ಲಿ ಹಲವಾರು ವರ್ಷಗಳಿಂದ ಭರತನಾಟ್ಯ ತರಗತಿಗಳ ಮೂಲಕ ನೂರಾರು ಮಕ್ಕಳಿಗೆ ತರಬೇತಿ ನೀಡುತ್ತಿದ್ದಾರೆ. ಸ್ವತಃ ಕಲಾವಿದೆಯಾಗಿರುವ ಇವರು ನಾಡಿನ ಅನೇಕ ಕಡೆಗಳಲ್ಲಿ ಹಲವಾರು ಭರತನಾಟ್ಯ ಕಾರ್ಯಕ್ರಮಗಳನ್ನು ನೀಡಿ ಗಮನಸೆಳೆದಿದ್ದಾರೆ. ಇವರು ಸದ್ಯ ಪುತ್ತೂರಿನ ನೃತ್ಯ ಗುರು ವಿ.ಮಂಜುನಾಥ ಎನ್.ಪುತ್ತೂರು ಇವರಲ್ಲಿ ವಿದ್ವತ್ ನೃತ್ಯ ಶಿಕ್ಷಣವನ್ನು ಪಡೆಯುತ್ತಿದ್ದಾರೆ.

ಭರತನಾಟ್ಯ ಪರೀಕ್ಷೆಯಲ್ಲಿ ರಾಜ್ಯಕ್ಕೆ 2ನೇ ಸ್ಥಾನ ಪಡೆದು ಉತ್ತಮ ಸಾಧನೆ ಮಾಡಿದ ಭವ್ಯ ಅವರಿಗೆ ಪಟ್ಟಣದ ಅನೇಕ ಮುಖಂಡರು, ವಿದ್ಯಾರ್ಥಿಗಳು, ಪಾಲಕರು ಹಾಗೂ ಕಲಾ ಪೋಷಕರು ಹರ್ಷ ವ್ಯಕ್ತಪಡಿಸಿದ್ದಾರೆ.

# ವೃತ್ತಿಬದ್ಧತೆಯ ಪತ್ರಕರ್ತ ಎಂ. ಮದನಮೋಹನ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ದಿ ಹಿಂದು ಪತ್ರಿಕೆಯ ವಿಶ್ರಾಂತ ಹಿರಿಯ ಪತ್ರಕಕರ್ತ ದಿ. ಮತ್ತಿಹಳ್ಳಿ ಮದನಮೋಹನ ಅವರ ನಿಧನದ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮತ್ತಿಹಳ್ಳಿ ಮದನಮೋಹನ ಅವರಲ್ಲಿನ ಪತ್ರಿಕೋದ್ಯಮದ ವೃತ್ತಿಬದ್ಧತೆ ಇತರರಿಗೆ ಮಾದರಿಯಾಗಿತ್ತು. ಅವರು ವಸ್ತುನಿಷ್ಠ ವರದಿಗಾರಿಕೆಗೆ ಹೆಸರುವಾಸಿಯಾಗಿದ್ದರು. ಅಪಾರ ಜ್ಞಾನ ಹೊಂದಿದ್ದರು. ನಾಡಿನ ಸಮಸ್ಯೆಗಳ ಬಗ್ಗೆ ಮತ್ತು ಜಲಸಂಪನ್ಮೂಲ ಹಾಗೂ ಪಂಚಾಯತ ರಾಜ್ ಮೊದಲಾದ ಸಂಗತಿಗಳ ಬಗ್ಗೆ ಆಳವಾದ ಜ್ಞಾನವನ್ನು ಹೊಂದಿದ್ದು, ವರದಿಗಳ ಮೂಲಕವೇ ಸರಕಾರಕ್ಕೆ ಮಾರ್ಗದರ್ಶನ ಮಾಡಿದ್ದರು. ಅತ್ಯಂತ ಪ್ರಾಮಾಣಿಕ ಪತ್ರಕರ್ತರಾಗಿದ್ದು, ಅವ್ಯಾಹತವಾಗಿ 47 ವರ್ಷಗಳ ಕಾಲ ವರದಿಗಾರರಾಗಿ ಕೆಲಸ ಮಾಡಿದ್ದರು.

ವಿಜಯ ಕರ್ನಾಟಕ ಸ್ಥಾನಿಕ ಸಂಪಾದಕ ಡಾ. ಬಂಡು ಕುಲಕರ್ಣಿ, ಪ್ರಜಾವಾಣಿಯ ರಾಹುಲ್ ಬೆಳಗಲಿ, ಸಂಘದ ಉಪಾಧ್ಯಕ್ಷ ರಾಜು ವಿಜಾಪುರ, ರಾಜ್ಯ ಕಾರ್ಯಕಾರಣಿ ಸದಸ್ಯ ಗಣಪತಿ ಗಂಗೊಳ್ಳಿ, ಗಿರೀಶ ಪಟ್ಟಣಶೆಟ್ಟಿ, ಅಬ್ಬಾಸ ಮುಲ್ಲಾ, ಸಂಗಮೇಶ ಮೆಣಸಿನಕಾಯಿ ಮಾತನಾಡಿ, ತಮ್ಮ ನುಡಿನಮನ ಸಲ್ಲಿಸಿದರು.

ಸಂಘದ ಅಧ್ಯಕ್ಷ ಲೋಚನೇಶ ಮಾತನಾಡಿದರು. ಸಂಘದ ಪ್ರಧಾನ ಕಾರ್ಯದರ್ಶಿ ಸುಶೀಲೇಂದ್ರ ಕುಂದರಗಿ, ಕಾರ್ಯದರ್ಶಿ ಡಾ. ವೀರೇಶ ಹಂಡಿಗಿ, ಗಿರೀಶ ಕುಲಕರ್ಣಿ, ಯಲ್ಲಪ್ಪ ಸೋಲಾರಗೊಪ್ಪ, ಮಂಜುನಾಥ ಜರತಾರಘರ, ಪ್ರಕಾಶ ಚಳಗೇರಿ ನವೀನ ಸೋಲಾರಗೊಪ್ಪ ಇತರರು ಪಾಲ್ಗೊಂಡಿದ್ದರು.

**ಉಪಲೋಕಾಯುಕ್ತ ಕೆ.ಎನ್. ಫಣೀಂದ್ರರಿಂದ ಜಿಲ್ಲಾಸ್ಪತ್ರೆಗೆ ಭೇಟಿ, ಪರಿಶೀಲನೆ**

# ಉತ್ತಮ ಚಿಕಿತ್ಸೆಗೆ ಆದ್ಯತೆ ನೀಡಿ



> ಲೋಕಾಯುಕ್ತ ತಂಡದ ಇನ್ನಿತರ ಸದ್ಯಸರು ಜಿಲ್ಲಾ ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ಭೇಟಿ ನೀಡಿ ವಾಸ್ತವ ಸ್ಥಿತಿಯ ಕುರಿತು ಉಪಲೋಕಾಯುಕ್ತರಿಗೆ ವರದಿ ನೀಡಿದರು. ಅವರ ವರದಿ ಆಧಾರದ ಮೇಲೆ ಜಿಮ್ಸ್ ನಿರ್ದೇಶಕ ಬಸವರಾಜ್ ಬೊಮ್ಮನಹಳ್ಳಿ ಅವರಿಗೆ ಆಸ್ಪತ್ರೆಯ ಮೆಡಿಕಲ್ ತ್ಯಾಜ್ಯ ನಿರ್ವಹಣೆಯನ್ನು ಸರಿಯಾಗಿ ನಿರ್ವಹಿಸಬೇಕು. ವಾರ್ಡ್‌ವಾರು ಕಸ ನಿರ್ವಹಣೆ ಹಾಗೂ ಮೆಡಿಕಲ್ ತ್ಯಾಜ್ಯವನ್ನು ಪ್ರತೇಕವಾಗಿ ವಿಲೇವಾರಿ ಮಾಡಲು ನಿರ್ದೇಶಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಉಪಲೋಕಾಯುಕ್ತ ಕೆ.ಎನ್. ಫಣೀಂದ್ರ ಅವರು ರವಿವಾರ ನಗರದ ಜಿಲ್ಲಾ ಆಸ್ಪತ್ರೆಗೆ ಅನಿರೀಕ್ಷಿತವಾಗಿ ಭೇಟಿ ನೀಡಿ, ಅಲ್ಲಿನ ವ್ಯವಸ್ಥೆಯನ್ನು ಪರಿಶೀಲಿಸಿದರು.

ಸಾಮಾನ್ಯ ಮಹಿಳೆಯರ ಹಾಗೂ ಪುರುಷರ ವಾರ್ಡ್‌ಗೆ ಭೇಟಿ ನೀಡಿ, ಒಳರೋಗಿಗಳ ಆರೋಗ್ಯ ವಿಚಾರಿಸಿದರು. ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲು ಹಾಗೂ ಔಷಧಿ ಪಡೆಯಲು ಆಸ್ಪತ್ರೆ ನೌಕರರು ಹಣ ಪಡೆಯುತ್ತಾರೆಯೇ ಎಂಬುದನ್ನು ಚಿಕಿತ್ಸೆಗೆ ದಾಖಲಾದ ಒಳರೋಗಿಗಳಲ್ಲಿ ವಿಚಾರಿಸಿದರು.

ಈ ವೇಳೆ ಚಿಕಿತ್ಸೆಗೆ ಆಗಮಿಸಿದ ರೋಗಿಯ ಸಂಬಂಧಿಕನೊಬ್ಬ ಮಾತನಾಡಿ, ಆಸ್ಪತ್ರೆಗೆ ದಾಖಲಾಗಲು ಆಗಮಿಸುವ ರೋಗಿಗಳು ಮೇಲ್ಮಹಡಿಗೆ ಆಗಮಿಸಲು ಸಮಸ್ಯೆಯಾಗುತ್ತಿದೆ. ಜಿಲ್ಲಾಸ್ಪತ್ರೆಗೆ ಆಗಮಿಸುವ ರೋಗಿಗಳ ಸಂಖ್ಯೆ ಅಧಿಕವಾಗಿದ್ದು, ವೀಲ್‌ಚೇರ್‌ಗಳ ಸಂಖ್ಯೆಗಳನ್ನು ಜಾಸ್ತಿ ಮಾಡಲು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಉಪಲೋಕಾಯುಕ್ತ ಕೆ.ಎನ್. ಫಣೀಂದ್ರ ಅವರು, ತಕ್ಷಣ ಆಸ್ಪತ್ರೆಯ ಮುಖ್ಯಸ್ಥರು ಈ ಬಗ್ಗೆ ಸೂಕ್ತ ವ್ಯವಸ್ಥೆ ಕಲ್ಪಿಸಲು ಸೂಚನೆ ನೀಡಿದರು.

ಆಸ್ಪತ್ರೆಯ ಕೆಲವು ಶೌಚಾಲಯಗಳ ನಿರ್ವಹಣೆ ಕಳಪೆಯಾಗಿದ್ದು, ಸರಿಯಾಗಿ ನಿರ್ವಹಿಸಬೇಕು ಹಾಗೂ ಜಿಲ್ಲಾಸ್ಪತ್ರೆಯಲ್ಲಿ ಸ್ವಚ್ಛತೆ ಹಾಗೂ ಉತ್ತಮ ಚಿಕಿತ್ಸೆಗೆ ಆದ್ಯತೆ ನೀಡಬೇಕು ಎಂದು ತಿಳಿಸಿದರು. ಕರ್ನಾಟಕ ಲೋಕಾಯುಕ್ತ ಸಂಪನ್ಮೂಲ ಅಧಿಕಾರಿ ಪ್ರಕಾಶ ಎಲ್.ನಾಡಗೇರ, ಕರ್ನಾಟಕ ಲೋಕಾಯುಕ್ತ ಉಪನಿಬಂಧಕ ಅಮರನಾರಾಯಣ ಕೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ, ಉಪಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಕಿರಣ ಪಿ.ಎಂ.ಪಾಟೀಲ, ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧೀಕ್ಷಕ ಸತೀಶ ಚಿಟಗುಬ್ಬಿ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಉಪ ವಿಭಾಗಾಧಿಕಾರಿ ಡಾ. ವೆಂಕಟೇಶ ನಾಯ್ಕ, ಡಿಎಚ್‌ಒ ಡಾ. ಎಸ್.ಎಸ್. ನೀಲಗುಂದ ಉಪಸ್ಥಿತರಿದ್ದರು.


**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಲಕ್ಷ್ಮೇಶ್ವರ, ತಾಲೂಕ : ಲಕ್ಷ್ಮೇಶ್ವರ, ಜಿಲ್ಲೆ : ಗದಗ**

**email : apmclaxmeshwar@gmail.com ದೂರವಾಣಿ : 08487-273380**

ಸಂ: ಕೃಮಾಇ/ಕೃ.ಉ.ಮಾ.ಸ/ಲ/ಲೀ&ಲೈ/178/2024–25 ದಿನಾಂಕ : 14–06–2024

**ಪ್ರಕಟಣೆ**

ಲಕ್ಷ್ಮೇಶ್ವರ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಹಾಗೂ ಉಪಮಾರುಕಟ್ಟೆ ಪ್ರಾಂಗಣಗಳಲ್ಲಿ ಸಮಿತಿಯ ಒಡೆತನದಲ್ಲಿ ಖಾಲಿ ಇರುವ ಈ ಕೆಳಕಾಣಿಸಿದ ಕೋಷ್ಠಕದಲ್ಲಿರುವ ವಿವಿಧ ಕಟ್ಟಡಗಳನ್ನು (ಪ್ರಸ್ತುತ ಸ್ಥಿತಿಯಲ್ಲಿ) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಮಾರುಕಟ್ಟೆ ಪ್ರಾಂಗಣಗಳಲ್ಲಿ ಆಸ್ತಿ ಹಂಚಿಕೆ ನಿಯಂತ್ರಣ) ನಿಯಮಗಳು 2004ರ ನಿಯಮ 14ರನ್ವಯ ಸಾರ್ವಜನಿಕರಿಂದ ಟೆಂಡರ್–ಕಂ–ಬಹಿರಂಗ ಹರಾಜು ಮೂಲಕ ಪ್ರತಿ 11 ತಿಂಗಳಿಗೊಮ್ಮೆ ನವೀಕರಿಸುವ 33 ತಿಂಗಳಿಗೊಮ್ಮೆ ಶೇಕಡಾ 5ರಂತೆ ಲೀವ್ಹ & ಲೈಸನ್ಸ ಶುಲ್ಕ ಹೆಚ್ಚಿಸುವ ಷರತ್ತಿಗೊಳಪಟ್ಟು ಗರಿಷ್ಠ 55 ತಿಂಗಳುಗಳ ಅವಧಿಗೆ ಮಾಸಿಕ ಲೀವ್ & ಲೈಸನ್ಸ್ ಫೀ ಆಧಾರದ ಮೇಲೆ ಹಂಚಿಕೆ ಮಾಡಲು ನಿರ್ಧರಿಸಿದ್ದು ಆಸಕ್ತರಿಂದ ಅರ್ಜಿಗಳನ್ನು ದ್ವಿಪ್ರತಿಗಳಲ್ಲಿ ಆಹ್ವಾನಿಸಲಾಗಿದೆ.

| ಕ್ರ. ಸಂ. | ಕಟ್ಟಡಗಳ ವಿವರ | ಒಟ್ಟು ಸಂಖ್ಯೆ | ನೊಂದಣಿ ಶುಲ್ಕ | ಮೀಸಲಾತಿ | ಅರ್ಜಿ ಶುಲ್ಕ | ಮಾಸಿಕ ಲೀವ್ & ಶುಲ್ಕ (18% ಜಿಎಸ್‌ಟಿ ಪ್ರತ್ಯೇಕ) | ಇ.ಎಂ.ಡಿ ಹಣ (ಪ್ರತಿಯೊಂದಕ್ಕೆ) |
|---|---|---|---|---|---|---|---|
| **ಮುಖ್ಯ ಮಾರುಕಟ್ಟೆ ಪ್ರಾಂಗಣ ಲಕ್ಷ್ಮೇಶ್ವರ** | | | | | | | |
| 1 | 60 ಎಂ.ಟಿ ಸಾಮರ್ಥ್ಯದ ತೂಕದ ಯಂತ್ರ | 01 | 500–00 | ಸಾಮಾನ್ಯ | 500–00 | 28480–00 | 56960–00 |
| **ಉಪ ಮಾರುಕಟ್ಟೆ ಪ್ರಾಂಗಣ ಬೆಳ್ಳಟ್ಟಿ** | | | | | | | |
| 2 | ಸಮುದಾಯ ಭವನ | 01 | 500–00 | ಸಾಮಾನ್ಯ | 500–00 | 23010–00 | 46100–00 |
| **ಉಪ ಮಾರುಕಟ್ಟೆ ಪ್ರಾಂಗಣ ಶಿರಹಟ್ಟಿ** | | | | | | | |
| 3 | ಹೊಸ ದಿನಸಿ ಮಳಿಗೆ ಸಂಖ್ಯೆ–1 | 01 | 500–00 | ಪ.ಜಾ | 500–00 | 4850–00 | 9700–00 |
| 4 | ಹೊಸ ದಿನಸಿ ಮಳಿಗೆ ಸಂಖ್ಯೆ–2 | 01 | 500–00 | ಸಾಮಾನ್ಯ | 500–00 | 4850–00 | 9700–00 |
| 5 | ಹೊಸ ದಿನಸಿ ಮಳಿಗೆ ಸಂಖ್ಯೆ–3 | 01 | 500–00 | ಸಾಮಾನ್ಯ | 500–00 | 4850–00 | 9700–00 |
| 6 | ಹೊಸ ದಿನಸಿ ಮಳಿಗೆ ಸಂಖ್ಯೆ–4 | 01 | 500–00 | ಪ.ಪಂ | 500–00 | 4850–00 | 9700–00 |
| 7 | ಹೊಸ ದಿನಸಿ ಮಳಿಗೆ ಸಂಖ್ಯೆ–5 | 01 | 500–00 | ಸಾಮಾನ್ಯ | 500–00 | 4850–00 | 9700–00 |
| 8 | ಹೊಸ ದಿನಸಿ ಮಳಿಗೆ ಸಂಖ್ಯೆ–6 | 01 | 500–00 | ಎಫ್.ಪಿ.ಓ | 500–00 | 4850–00 | 9700–00 |
| 9 | ಹೊಸ ದಿನಸಿ ಮಳಿಗೆ ಸಂಖ್ಯೆ–7 | 01 | 500–00 | ಮಹಿಳೆ(ಸಾ) | 500–00 | 4850–00 | 9700–00 |
| 10 | ಹೊಸ ದಿನಸಿ ಮಳಿಗೆ ಸಂಖ್ಯೆ–8 | 01 | 500–00 | ಸಾಮಾನ್ಯ | 500–00 | 4850–00 | 9700–00 |
| 11 | ಹೊಸ ದಿನಸಿ ಮಳಿಗೆ ಸಂಖ್ಯೆ–9 | 01 | 500–00 | ಸಾಮಾನ್ಯ | 500–00 | 4850–00 | 9700–00 |
| 12 | ಹೊಸ ದಿನಸಿ ಮಳಿಗೆ ಸಂಖ್ಯೆ–10 | 01 | 500–00 | ಪ.ಜಾ | 500–00 | 4850–00 | 9700–00 |
| 13 | ಉಪಾಹರ ಗೃಹ (ಕ್ಯಾಂಟಿನ್) | 01 | 500–00 | ಸಾಮಾನ್ಯ | 500–00 | 5120–00 | 10300–00 |
| 14 | ಹಳೆ ದಿನಸಿ ಮಳಿಗೆ ಸಂಖ್ಯೆ–1 | 01 | 500–00 | ಸಾಮಾನ್ಯ | 500–00 | 4100–00 | 8200–00 |
| 15 | ಹಳೆ ದಿನಸಿ ಮಳಿಗೆ ಸಂಖ್ಯೆ–2 | 01 | 500–00 | ಎಫ್.ಪಿ.ಓ | 500–00 | 4100–00 | 8200–00 |
| 16 | ಹಳೆ ದಿನಸಿ ಮಳಿಗೆ ಸಂಖ್ಯೆ–3 | 01 | 500–00 | ಸಾಮಾನ್ಯ | 500–00 | 4100–00 | 8200–00 |
| 17 | ಹಳೆ ದಿನಸಿ ಮಳಿಗೆ ಸಂಖ್ಯೆ–4 | 01 | 500–00 | ಸಾಮಾನ್ಯ | 500–00 | 4100–00 | 8200–00 |
| 18 | ಹಳೆ ದಿನಸಿ ಮಳಿಗೆ ಸಂಖ್ಯೆ–5 | 01 | 500–00 | ಮಹಿಳೆ(ಪ.ಜಾ) | 500–00 | 4100–00 | 8200–00 |
| 19 | ಹಳೆ ದಿನಸಿ ಮಳಿಗೆ ಸಂಖ್ಯೆ–6 | 01 | 500–00 | ವಿಕಲಚೇತನರಿಗೆ | 500–00 | 4100–00 | 8200–00 |

(1) ನಿಗದಿತ ಖಾಲಿ ಟೆಂಡರ ಫಾರಂಗಾಗಿ ಅರ್ಜಿ ಸಲ್ಲಿಸುವಾಗ ಇತ್ತಿಚಿನ ಭಾವ ಚಿತ್ರದೊಂದಿಗೆ ಫಾರಂ ಶುಲ್ಕ, ನೋಂದಣಿ ಶುಲ್ಕ ಮತ್ತು ನಿಗದಿಪಡಿಸಿದ ಇ.ಎಂ.ಡಿ ಮೊತ್ತವನ್ನು ಆರ್.ಟಿ.ಜಿ.ಎಸ್/ಡಿ.ಡಿ ರೂಪದಲ್ಲಿ ಕಾರ್ಯದರ್ಶಿ ಕೃ.ಉ.ಮಾ.ಸ ಲಕ್ಷ್ಮೇಶ್ವರ ಇವರ ಹೆಸರಿಗೆ ಪಡೆದು (ಆರ್.ಟಿ.ಜಿ.ಎಸ್ ಮಾಡಿದ್ದಲ್ಲಿ ವೋಚರನ್ನು ಲಗತ್ತಿಸತಕ್ಕದ್ದು.) ದಿನಾಂಕ : **02–07–2024** ರೊಳಗಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು. ಸಮಿತಿಯ ಖಾತಗೆ ಹಣ ಜಮಾ ಆದಮೇಲೆ ರಶೀದಿ ಪಡೆದುಕೊಳ್ಳತಕ್ಕದ್ದು. (2) ದಿನಾಂಕ : **04–07–2024** ರೊಳಗಾಗಿ ಖಾಲಿ ಟೆಂಡರ ಫಾರಂಗಳನ್ನು ಪಡೆದುಕೊಳ್ಳತಕ್ಕದ್ದು. (3) ಭರ್ತಿ ಮಾಡಿದ ಟೆಂಡರ ಫಾರಂಗಳನ್ನು ಸಲ್ಲಿಸುವ ಕೊನೆಯ ದಿನಾಂಕ : **06–07–2024** ರ ಮದ್ಯಾಹ್ನ 1.00 ಗಂಟೆಯೊಳಗೆ ಟೆಂಡರ ಫಾರಂಗಳನ್ನು ಸಲ್ಲಿಸತಕ್ಕದ್ದು. ಸಾಧ್ಯವಾದಲ್ಲಿ **ಅದೇ ದಿನ ಮಧ್ಯಾಹ್ನ 2.30 ಗಂಟೆಗೆ ಲಕ್ಷ್ಮೇಶ್ವರ ಸಮಿತಿಯ ಆಡಳಿತ ಕಛೇರಿಯ ಸಭಾಭವನದಲ್ಲಿ ಬಹಿರಂಗ ಹರಾಜು ನಡೆಸಲಾಗುವದು. ನಂತರ ಟೆಂಡರ್ ಅರ್ಜಿಗಳನ್ನು ತೆರೆಯಲಾಗುವುದು.** (4) ಸರ್ಕಾರದ ಅಧಿಸೂಚನೆಯಂತೆ ಶೇಕಡಾವಾರು ಮೀಸಲಾತಿಯನ್ನು ಕಲ್ಪಿಸಲಾಗಿದ್ದು, ಮೀಸಲಾತಿ ಪಡೆಯಲಿಚ್ಚಿಸುವವರು ಅಧಿಕೃತ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸಬೇಕು. (5) ಹಂಚಿಕೆಯು ಮಾನ್ಯ ನಿರ್ದೇಶಕರು ಕೃಷಿ ಮಾರಾಟ ಇಲಾಖೆ ಬೆಂಗಳೂರು ಇವರ ಮಂಜೂರಾತಿಗೆ ಒಳಪಟ್ಟಿರುತ್ತದೆ. ಮಂಜೂರಾತಿ ಆದೇಶ ಬಂದ ನಂತರ ಕಟ್ಟಡದ ಹಂಚಿಕೆ ಆದೇಶ ನೀಡಲಾಗುವುದು. (6) ಯಾವುದೇ ಟೆಂಡರನ್ನು ಸ್ವೀಕರಿಸುವ/ತಿರಸ್ಕರಿಸುವ ಇಲ್ಲವೇ ಸಂಪೂರ್ಣ ಟೆಂಡರನ್ನು ರದ್ದುಪಡಿಸುವ ಅಧಿಕಾರವನ್ನು ಸಮಿತಿಯು ಕಾಯ್ದಿರಿಸಿಕೊಂಡಿದೆ. ಮೇಲ್ಕಂಡ ಯಾವುದೇ ಬದಲಾವಣೆ/ತಿದ್ದುಪಡಿ ಇದ್ದಲ್ಲಿ ಕಚೇರಿ ನೋಟೀಸ್ ಬೋರ್ಡಿನಲ್ಲಿ ಮಾತ್ರ ಪ್ರಕಟಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ರಜಾ ದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಮಾಹಿತಿ ಪಡೆಯಬಹುದಾಗಿದೆ.

**ಸಹಿ/– (ಶಿವಾನಂದ.ಜಿ.ಮಠ)**
**ಕಾರ್ಯದರ್ಶಿ, ಕೃ.ಉ.ಮಾ.ಸ. ಲಕ್ಷ್ಮೇಶ್ವರ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/27/2024–25

**ಸಹಿ/– (ಸುಧಾ.ಆರ್.ಭಂಡಿ)**
**ಆಡಳಿತಾಧಿಕಾರಿಗಳು, ಕೃ.ಉ.ಮಾ.ಸ. ಲಕ್ಷ್ಮೇಶ್ವರ**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka